ಸಂಪುಟ : 10 ಸಂಚಿಕೆ: 243 ಪುಟ : 4+2 ಬೆಲೆ: 3.00 ಶನಿವಾರ ನವೆಂಬರ್ 08 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 243 Pages : 4+2 Price : 3.00 Saturday November 08 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಸಾರ್ವಜನಿಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ನರಗುಂದ ಪುರಸಭೆ ವ್ಯಾಪ್ತಿಯಲ್ಲಿ ಬರುವ ಪುರಸಭೆ ಮಾಲ್ಕಿ ಮತ್ತು ನಾಗರಿಕ ಸೌಲಭ್ಯಕ್ಕೆ ಕಾಯ್ದಿರಿಸಿದ ಜಾಗೆಗಳನ್ನು ರಾಜ್ಯ ಸರಕಾರಿ ಇಲಾಖೆಗಳಿಗೆ ಮಂಜೂರಿಸಲು ರಿಸನಂ:311/3+4, ಪ್ಲಾಟ ನಂ. 52ನ್ನು ಸಭೆಯ ಠರಾವು ನಂ: 150, 15-09-2025ರಂದು ಜರುಗಿದ ಸಭೆಯಲ್ಲಿ 30 ವರ್ಷಗಳ ಅವಧಿಗೆ ಮೀರದ ಹಾಗೆ ಲೀಸ್ ಆಧಾರದ ಮೇಲೆ ನಿವೇಶನಗಳನ್ನು ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ನರಗುಂದ ಇವರಿಗೆ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ಹಂಚಿಕೆ ಮಾಡಲು ನಿರ್ಣಯಿಸಲಾಗಿದೆ.

ಈ ಬಗ್ಗೆ ಯಾರಾದರೂ ಸಲಹೆ/ಸೂಚನೆ/ಆಕ್ಷೇಪಣೆ ಸಲ್ಲಿಸುವುದಿದ್ದಲ್ಲಿ ಈ ಪ್ರಕಟಣೆ ಪ್ರಕಟಗೊಂಡ 15 ದಿನಗಳೊಳಗಾಗಿ ಲಿಖಿತವಾಗಿ ಪುರಸಭೆಗೆ ಸಲ್ಲಿಸಬಹುದಾಗಿದೆ. ಅವಧಿ ಮೀರಿ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

## ಮಾಹಿತಿ ಕಾರ್ಯಾಗಾರ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಸೂಕ್ಷ್ಮ, ಸಣ್ಣ ಹಾಗೂ ಮಧ್ಯಮ ಉದ್ಯಮಗಳ (ಎಂ.ಎಸ್.ಎಂ.ಇ) ಕಾರ್ಯಕ್ಷಮತೆಯನ್ನು ಹೆಚ್ಚಿಸಲು ಹಾಗೂ ಅವುಗಳ ಕಾರ್ಯಚಟುವಟಿಕೆಗಳನ್ನು ವೇಗಗೊಳಿಸಲು ಭಾರತ ಸರ್ಕಾರದ ಖಂಒಕ ಯೋಜನೆಯಡಿಯಲ್ಲಿ ಟ್ರೇಡ್ ರಿಸೀವೆಬಲ್ ಡಿಸ್ಕೌಂಟಿಂಗ ಸಿಸ್ಟಮ್ ಎನ್ವರಾನ್ಮೆಂಟ್ ಆ್ಯಂಡ್ ಸೋಷಿಯಲ್ ಮ್ಯಾನೇಜ್‌ಮೆಂಟ್ ಸಪೋರ್ಟ್ ಫಾರ್ ಎಮ್‌ಎಸ್‌ಎಮ್‌ಇಎಸ್/ಇಎಸೆಮ್‌ಗೆ ಸಂಬಂಧಿಸಿದಂತೆ ಮಾಹಿತಿ ಕಾರ್ಯಾಗಾರವನ್ನು ನ. 8ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ, ಎಪಿಎಂಸಿ ರಸ್ತೆ, ಗದಗದಲ್ಲಿ ಆಯೋಜಿಸಲಾಗಿದೆ.

ಈ ಕಾರ್ಯಕ್ರಮದಲ್ಲಿ ಪ್ರತಿಷ್ಠಿತ ಸಂಸ್ಥೆಯಿಂದ ಅಗಮಿಸುವ ಪರಿಣಿತ ಬೋಧಕರು ಎಂ.ಎಸ್.ಎಂ.ಇ ಉದ್ಯಮಶೀಲರಿಗೆ ಅತ್ಯುಪಯುಕ್ತ ಮಾಹಿತಿಯನ್ನು ನೀಡುವರು. ಸದರಿ ಕಾರ್ಯಾಗಾರಕ್ಕೆ ಎಂಎಸ್ಎಂಇ ಉದ್ಯಮಿಗಳು ಭಾಗವಹಿಸಲು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಕೋರಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೈಗಾರಿಕಾ ಕೇಂದ್ರ ಗದಗ ಕಛೇರಿ ದೂರವಾಣಿ ಸಂಖ್ಯೆ-08372-231398 ನ್ನು ಸಂಪರ್ಕಿಸಬಹುದಾಗಿದೆ.

### ಹುಬ್ಬಳ್ಳಿಯ ನವೀಕೃತ ಕೇಂದ್ರ ಬಸ್ ನಿಲ್ದಾಣ ಉದ್ಘಾಟಿಸಿದ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ

# ಬಸ್ ನಿಲ್ದಾಣವನ್ನು ವ್ಯವಸ್ಥಿತವಾಗಿ ನಿರ್ವಹಿಸಿ



■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಹುಬ್ಬಳ್ಳಿಯ ನವೀಕೃತ ಬಸ್ ನಿಲ್ದಾಣವನ್ನು ತುಂಬಾ ಅಚ್ಚುಕಟ್ಟಾಗಿ ನಿರ್ಮಿಸಲಾಗಿದೆ. ಬಸ್ ನಿಲ್ದಾಣವನ್ನು ವ್ಯವಸ್ಥಿತ ರೀತಿಯಲ್ಲಿ ನಿರ್ವಹಣೆ ಮಾಡಬೇಕು. ಶೌಚಾಲಯದ ಕುರಿತು ಹೆಚ್ಚಿನ ಗಮನಹರಿಸಬೇಕಾಗುತ್ತದೆ. ಬಸ್ ನಿಲ್ದಾಣವನ್ನು ವ್ಯವಸ್ಥಿತ ರೀತಿಯಲ್ಲಿ ನಿರ್ವಹಣೆ ಮಾಡದಿದ್ದಲ್ಲಿ ವಿಭಾಗೀಯ ನಿಯಂತ್ರಣಾಧಿಕಾರಿಗಳ ಮೇಲೆ ಕ್ರಮ ಜರುಗಿಸಲಾಗುವುದು ಎಂದು ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಹೇಳಿದರು.

ಶುಕ್ರವಾರ ಆಯೋಜಿಸಿದ್ದ ಹುಬ್ಬಳ್ಳಿಯ ನವೀಕೃತ ಕೇಂದ್ರ ಬಸ್ ನಿಲ್ದಾಣಗಳ ಉದ್ಘಾಟನೆ ಮತ್ತು ಅಪಘಾತ/ ಅಪರಾಧ ರಹಿತ ಸೇವೆ ಸಲ್ಲಿಸಿದ ಸಂಸ್ಥೆಯ ಚಾಲನಾ ಸಿಬ್ಬಂದಿಗಳಿಗೆ ಬೆಳ್ಳಿ ಪದಕ ವಿತರಣೆಯ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹುಬ್ಬಳ್ಳಿ-ಧಾರವಾಡದಲ್ಲಿ ಸುಮಾರು 100 ಎಕರೆ ಜಾಗವನ್ನು ಹೊಂದಿರುವ ಸಂಸ್ಥೆ ನಮ್ಮದು. 700 ಹೊಸ ಬಸ್‌ಗಳನ್ನು ನೀಡಲಾಗಿದೆ. ಅಲ್ಲದೇ 300 ಬಸ್‌ಗಳಿಗೆ ಟೆಂಡರ್ ಕರೆಯಲಾಗಿದೆ. ಸುಮಾರು 150 ಬಸ್‌ಗಳಿಗೆ ಅನುಮೋದನೆ ಕೊಡಲಾಗಿದೆ. ಡಿಸೆಂಬರ್‌ನಲ್ಲಿ ಅಧಿವೇಶನ ಮುಗಿದ ಬಳಿಕ ಮತ್ತಷ್ಟು ಬಸ್‌ಗಳನ್ನು ನೀಡಲಾಗುವುದು. 2019ರಲ್ಲಿ 13 ಸಾವಿರ ಹೊಸ ಸಿಬ್ಬಂದಿ ನೇಮಕಕ್ಕೆ ಅನುಮೋದನೆ ನೀಡಲಾಗಿತ್ತು. ಹಣಕಾಸು ಇಲಾಖೆ ಸುಮಾರು 9 ಸಾವಿರ ಸಿಬ್ಬಂದಿ ನೇಮಕಕ್ಕೆ ಅನುಮತಿ ನೀಡಿತು. ನಂತರದ ವರ್ಷಗಳಲ್ಲಿ ಯಾವುದೇ ನೇಮಕಾತಿ ನಡೆಯಲಿಲ್ಲ. ಸುಮಾರು 1 ಸಾವಿರ ಜನರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಪತ್ರ ವಿತರಿಸಲಾಗಿದೆ. ಇಂದು 37 ಜನರಿಗೆ ನೇಮಕಾತಿ ಆದೇಶ ಪತ್ರಗಳನ್ನು ವಿತರಿಸಲಾಗುತ್ತಿದೆ ಎಂದು ತಿಳಿಸಿದರು.

ಸಂಸ್ಥೆಯ ಅಧ್ಯಕ್ಷ ಭರಮಗೌಡ (ರಾಜು) ಅಲಗೌಡ ಕಾಗೆ ಮಾತನಾಡಿ, ಪ್ರತಿ ದಿನ ಸುಮಾರು 25 ಲಕ್ಷ ▸▸3ನೇ ಪುಟಕ್ಕೆ

ಕಾರ್ಮಿಕ ಇಲಾಖೆ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಎಸ್.ಲಾಡ್ ಮಾತನಾಡಿ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು 4 ವಿಭಾಗಗಳನ್ನು ಹೊಂದಿದೆ. ಪ್ರತಿ ದಿನ ಸುಮಾರು 1.50 ಕೋಟಿ ಜನರು ಸುರಕ್ಷಿತವಾಗಿ ಪ್ರಯಾಣಿಸುತ್ತಿದ್ದಾರೆ. ಸಾರಿಗೆ ವ್ಯವಸ್ಥೆಯಲ್ಲಿ ಕರ್ನಾಟಕ ರಾಜ್ಯ ಇಡೀ ದೇಶದಲ್ಲಿ ಮುಂಚೂಣಿಯಲ್ಲಿದೆ. ಸಾರಿಗೆ ಸಂಸ್ಥೆಗಳಿಗೆ ಒಟ್ಟಾರೆಯಾಗಿ 670 ಪ್ರಶಸ್ತಿಗಳು ದೊರೆತಿವೆ. ಅದರಲ್ಲಿ ಸುಮಾರು 400 ಪ್ರಶಸ್ತಿಗಳು ರಾಮಲಿಂಗಾರೆಡ್ಡಿ ಅವರ ಅಧಿಕಾರಾವಧಿಯಲ್ಲಿ ಸಂದಿವೆ ಎಂದರು.

ಶಾಸಕ ಮಹೇಶ ಟೆಂಗಿನಕಾಯಿ ಮಾತನಾಡಿ, ಹುಬ್ಬಳ್ಳಿಯ ಕೇಂದ್ರ ಬಸ್ ನಿಲ್ದಾಣವನ್ನು ಅತ್ಯುತ್ತಮವಾಗಿ ನಿರ್ಮಿಸಲಾಗಿದೆ. ಶಕ್ತಿ ಯೋಜನೆಯಿಂದ ಮಹಿಳೆಯರಿಗೆ ಅನುಕೂಲವಾಗಿದೆ. ನೇಮಕಾತಿ ಪ್ರಕ್ರಿಯೆ ಸಮಸ್ಯೆಯನ್ನು ಕೂಡಲೇ ಪರಿಹರಿಸಬೇಕಾಗಿದೆ. ಸಾರಿಗೆ ಸಿಬ್ಬಂದಿಗಳ ಸಮಸ್ಯೆಗೆ ಪರಿಹಾರ ಒದಗಿಸಬೇಕಾಗುತ್ತದೆ. ಪ್ರಯಾಣಿಕರು ತಮ್ಮ ಜವಾಬ್ದಾರಿ ಅರಿತುಕೊಳ್ಳಬೇಕು. ಆಟೋ ನಿಲ್ದಾಣಕ್ಕೆ ಅವಕಾಶ ಕಲ್ಪಿಸಬೇಕು ಎಂದು ತಿಳಿಸಿದರು.

### ರಾಜ್ಯ ಮಟ್ಟದ ಪುರುಷರ ಲಾನ್ ಟೆನ್ನಿಸ್ ಪಂದ್ಯಾವಳಿ ಉದ್ಘಾಟಿಸಿದ ಸಚಿವ ಸಂತೋಷ್ ಲಾಡ್

# ಕ್ರೀಡೆಯಿಂದ ದೈಹಿಕ, ಮಾನಸಿಕ ಆರೋಗ್ಯ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡದಲ್ಲಿ 2023ರಲ್ಲಿ ಐಟಿಎಫ್ ಪಂದ್ಯಾವಳಿಗಳನ್ನು ಆಯೋಜಿಸಲಾಗಿತ್ತು. ವಿವಿಧ 30 ದೇಶಗಳಿಂದ ಟೆನ್ನಿಸ್ ಆಟಗಾರರು ಈ ಪಂದ್ಯಾವಳಿಗಳಲ್ಲಿ ಭಾಗವಹಿಸಿದ್ದರು. ಇದು ನಮ್ಮ ಧಾರವಾಡ ಜಿಲ್ಲೆಗೆ ಹೆಮ್ಮೆಯ ವಿಷಯ ಎಂದು ಸಚಿವ ಸಂತೋಷ್ ಎಸ್.ಲಾಡ್ ಹೇಳಿದರು.

ಅವರು ಶುಕ್ರವಾರ ಧಾರವಾಡ ಡಿಡಿಎಲ್‌ಟಿಎ ಆವರಣದ ರಾಜ್ಯಾಧ್ಯಕ್ಷ ಪೆವಲಿಯನ್‌ನಲ್ಲಿ ಜರುಗಿದ ರಾಜ್ಯ ಮಟ್ಟದ ಪುರುಷರ ಲಾನ್ ಟೆನ್ನಿಸ್ ಪಂದ್ಯಾವಳಿಯನ್ನು ಉದ್ಘಾಟಿಸಿ ಮಾತನಾಡಿದರು.

ರಾಜ್ಯ ಮಟ್ಟದ ಟೆನ್ನಿಸ್ ಪಂದ್ಯಾವಳಿಗೆ ಈ ಬಾರಿ ಅಭೂತಪೂರ್ವ ಪ್ರತಿಕ್ರಿಯೆ ವ್ಯಕ್ತವಾಗಿದೆ. ಪ್ರತಿಷ್ಠಿತ ಪಂದ್ಯಾವಳಿನಲ್ಲಿ 300ಕ್ಕೂ ಹೆಚ್ಚು ಕ್ರೀಡಾಪಟುಗಳು ಧಾರವಾಡದಿಂದ ಭಾಗವಹಿಸಿದ್ದು, ಇದು ರಾಜ್ಯದಲ್ಲಿ ಟೆನ್ನಿಸ್ ಕ್ರೀಡೆಯ ಜನಪ್ರಿಯತೆಯನ್ನು ಎತ್ತಿ ಹಿಡಿದಿದೆ ಎಂದು ತಿಳಿಸಿದರು.

ಶಾಸಕ ಅರವಿಂದ ಬೆಲ್ಲದ ಮಾತನಾಡಿ, ಧಾರವಾಡವು ಕ್ರೀಡಾ ಕ್ಷೇತ್ರದಲ್ಲಿ ಉತ್ತಮ ಬೆಳವಣಿಗೆಯನ್ನು ಕಾಣುತ್ತಿದೆ. ಕ್ರೀಡಾ ಕ್ಷೇತ್ರದಲ್ಲಿ ಧಾರವಾಡದ ಯುವಜನರು ಉತ್ತಮ ಸಾಧನೆ ಮಾಡುತ್ತಿದ್ದು, ಮುಂದಿನ ದಿನಗಳಲ್ಲಿ ಕ್ರೀಡೆಯಲ್ಲಿ ಇನ್ನಷ್ಟು ಪ್ರಗತಿ ಸಾಧಿಸಲು ಎಲ್ಲ ರೀತಿಯ ಸಹಕಾರ ನೀಡುವುದಾಗಿ ಹೇಳಿದರು. ನಗರದ ಹೃದಯಭಾಗದಲ್ಲಿರುವ ಐತಿಹಾಸಿಕ ಜಿಮ್ ಖಾನಾ ಕ್ಲಬ್‌ನ ಸಮಗ್ರ ಜೀರ್ಣೋದ್ಧಾರ ಮತ್ತು ಅಭಿವೃದ್ಧಿಗೆ ಕ್ರಮಕೈಗೊಳ್ಳುವಂತೆ ಸಚಿವರಲ್ಲಿ ಮನವಿ ಮಾಡಿಕೊಂಡರು. ವೇದಿಕೆಯಲ್ಲಿ ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ, ವಿಧಾನ ಪರಿಷತ್ ಸದಸ್ಯ, ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಎಫ್.ಹೆಚ್. ಜಕ್ಕಪ್ಪನವರ, ಹುಬ್ಬಳ್ಳಿ-ಧಾರವಾಡ ಮಹಾನಗರ ಮಹಾಪೌರರಾದ ಜ್ಯೋತಿ ಪಾಟೀಲ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪಾಟೀಲ, ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕಿ ಪ್ರಿಯಾಂಗಾ ಎಂ, ಹುಬ್ಬಳ್ಳಿ-ಧಾರವಾಡ ಮಹಾನಗರ ಪೊಲೀಸ್ ಆಯುಕ್ತ ಎನ್. ಶಶಿಕುಮಾರ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಡಾ. ರುದ್ರೇಶ ಎಸ್. ಘಾಳಿ ಮತ್ತು ಸಂತೋಷ ಬಿರಾದಾರ ಉಪಸ್ಥಿತರಿದ್ದರು. ಕಾರ್ಯದರ್ಶಿ ಸಂತೋಷ ಶೆಟ್ಟಿ ಸ್ವಾಗತಿಸಿದರು. ಆರತಿ ದೇವಶಿಖಾಮಣಿ ನಿರೂಪಿಸಿ, ವಂದಿಸಿದರು. ಕಾರ್ಯಕ್ರಮದಲ್ಲಿ ಟೆನ್ನಿಸ್ ತರಬೇತುದಾರರು, ನಿರ್ಣಾಯಕರು, ಸ್ಪರ್ಧಾಳುಗಳು, ಪಾಲಕರು ಉಪಸ್ಥಿತರಿದ್ದರು.

ಕ್ರೀಡೆಯು ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕೆ ಅತ್ಯಗತ್ಯ. ಕ್ರೀಡಾ ಕ್ಷೇತ್ರದಲ್ಲಿ ತನ್ನದೇ ಆದ ಛಾಪು ಮೂಡಿಸುತ್ತಿರುವ ಧಾರವಾಡ ಇದೀಗ ಟೆನ್ನಿಸ್ ಕ್ರೀಡೆಯಲ್ಲಿಯೂ ಮುಂಚೂಣಿಗೆ ಬರುತ್ತಿದೆ. ರಾಜ್ಯದ ರಾಜಧಾನಿ ಬೆಂಗಳೂರಿನ ನಂತರ ಬರೋಬ್ಬರಿ ಎಂಟು ಟೆನ್ನಿಸ್ ಕೋರ್ಟ್‌ಗಳನ್ನು ಹೊಂದಿರುವ ಏಕೈಕ ನಗರ ಎಂಬ ಹೆಗ್ಗಳಿಕೆಗೆ ಧಾರವಾಡ ಪಾತ್ರವಾಗಿದೆ ಎಂದು ಸಚಿವ ಸಂತೋಷ್ ಲಾಡ್ ಹೆಮ್ಮೆ ವ್ಯಕ್ತಪಡಿಸಿದರು.

## ಆಕ್ಷೇಪಣೆಗಳಿಗೆ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗದಿಂದ ಮುಳಗುಂದ ರಸ್ತೆಯಲ್ಲಿ ದೊಡ್ಡ ಪ್ರಮಾಣದ ವಿಂಡ್ ಪವರ್ ವಾಹನಗಳು ಚಲಿಸಲು ರಸ್ತೆಯ ಎಡ ಮತ್ತು ಬಲಬದಿಯಲ್ಲಿನ ಮರದ ರೆಂಬೆಗಳು ಅಡಚಣೆಯಾಗಿದ್ದು, ಸುರಕ್ಷತೆ ದೃಷ್ಟಿಯಿಂದ ಗಿಡಗಳನ್ನು ತೆರವುಗೊಳಿಸಲು ಆನಂದ ಇನ್ಫ್ರಾ ರಿಯಾಲಿಟಿ ಪ್ರೈ.ಲಿ ಬೆಂಗಳೂರು ಇವರು ವಲಯ ಕಛೇರಿಗೆ ಕೋರಿರುತ್ತಾರೆ.

ಗದಗ ವಲಯ ಅರಣ್ಯಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಮರಗಳನ್ನು ಪರಿಶೀಲಿಸಿ ನೋಡಲಾಗಿ, ವಿಂಡ್ ಪವರ್ ವಾಹನಗಳು ಭಾರೀ ಗಾತ್ರದ ವಾಹನಗಳಾಗಿರುವುದರಿಂದ ಚಲಿಸುವಾಗ ಅಡಚಣೆಯಾಗುತ್ತಿದೆ. ಗದಗದಿಂದ ಮುಳಗುಂದ-ಬಸಾಪೂರ ಕ್ರಾಸ್‌ವರೆಗೆ ರಸ್ತೆಯ ಎರಡೂ ಬದಿಯಲ್ಲಿರುವ 256 ಮರಗಳ ರೆಂಬೆಗಳ ಕಟಾವಣೆಗೆ ಹಾಗೂ 12 ಮರಗಳ ಸಂಪೂರ್ಣ ಕಟಾವಣೆ ಕುರಿತು ಅರಣ್ಯ ಇಲಾಖೆಯವರು ಕೋರಿದ್ದಾರೆ.

ಈ ಕುರಿತು ಆಕ್ಷೇಪಣೆ ಸಲ್ಲಿಸಬಯಸುವರು ತಮ್ಮ ಆಕ್ಷೇಪಣೆಗಳನ್ನು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಗದಗ ಉಪ ವಿಭಾಗ, ಗದಗ ಹಾಗೂ ಮರ ಅಧಿಕಾರಿಯವರಿಗೆ ಬಿಂಕದಕಟ್ಟಿ ಕಛೇರಿಯಲ್ಲಿ ಲಿಖಿತ ರೂಪದಲ್ಲಿ ನ. 17ರ ಒಳಗಾಗಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ-08372-200978 ಸಂರ್ಕಿಸಲು ಕೋರಿದೆ. ನಿಗದಿತ ದಿನಾಂಕದೊಳಗೆ ಆಕ್ಷೇಪಣೆಗಳು ಸಲ್ಲಿಸದಿದ್ದರೆ ನಂತರ ಬಂದ ತಕರಾರುಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು, ಉಪಅರಣ್ಯ ಸಂರಕ್ಷಣಾಧಿಕಾರಿಗಳು, ತಾಂತ್ರಿಕ ಸಹಾಯಕರು ಪತ್ರಿಕಾ ಪ್ರಕಣೆಯಲ್ಲಿ ತಿಳಿಸಿದ್ದಾರೆ.

### ರೈತರ ಪರವಾಗಿ ಆಡಳಿತವನ್ನು ಎಚ್ಚರಿಸಿದ ತೋಂಟದ ಸಿದ್ಧರಾಮ ಸ್ವಾಮಿಗಳು

## ಸಂಭವನೀಯ ಅನಾಹುತಕ್ಕೆ ಸರಕಾರಗಳೇ ಹೊಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಕಳೆದ ಹಲವಾರು ದಿನಗಳಿಂದ ನಾಡಿನ ರೈತರು ತಾವು ಬೆಳೆದ ಕಬ್ಬಿಗೆ ಯೋಗ್ಯ ಬೆಲೆಯನ್ನು ನೀಡಬೇಕೆಂದು ಹೋರಾಟ ಮಾಡುತ್ತಿದ್ದಾರೆ. ಸಕ್ಕರೆ ಕಾರಖಾನೆಗಳ ಮಾಲಿಕರು ರೈತರು ಕೇಳಿದ ಬೆಲೆಯನ್ನು ನೀಡಲು ಸಾಧ್ಯವಾಗುವುದಿಲ್ಲವೆಂದು ನಿರಾಕರಿಸಿದ ಹಿನ್ನೆಲೆಯಲ್ಲಿ ರಾಜ್ಯ ಮತ್ತು ಕೇಂದ್ರ ಸರಕಾರಗಳು ಪರಸ್ಪರ ಸಹಯೋಗದೊಂದಿಗೆ ರೈತರ ಸಮಸ್ಯೆಯನ್ನು ನೀಗಿಸುವುದು ಕಷ್ಟದ ಮಾತೇನೂ ಅಲ್ಲ. ಈ ದಿಶೆಯಲ್ಲಿ ಇಚ್ಛಾಶಕ್ತಿಯೊಂದಿಗೆ ಸರಕಾರಗಳು ಕೂಡಲೇ ರೈತರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ಡಂಬಳ-ಗದಗ ಜಗದ್ಗುರು ತೆಂಟದಾರ್ಯ ಸಂಸ್ಥಾನಮಠದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಆಗ್ರಹಿಸಿದ್ದಾರೆ.



ಪ್ರಾಕೃತಿಕ ಆಪತ್ತುಗಳು ಅನ್ನದಾತರನ್ನು ಪದೇ ಪದೇ ಸಂಕಷ್ಟಕ್ಕೆ ಸಿಲುಕಿಸುತ್ತಿವೆ. ಅತಿವೃಷ್ಟಿ-ಅನಾವೃಷ್ಟಿಗಳಿಂದ ತೊಂದರೆಗೊಳಗಾದ ರೈತರು ತಾವು ಬೆಳೆದ ಅಲ್ಪಸ್ವಲ್ಪ ಬೆಳೆಗೆ ಯೋಗ್ಯ ಬೆಲೆಯನ್ನು ಪಡೆಯದಿದ್ದರೆ ಅವರು ಬದುಕುವುದಾದರೂ ಹೇಗೆ? ಅಗತ್ಯ ವಸ್ತುಗಳ ಬೆಲೆ ಏರಿಕೆ, ಮಕ್ಕಳ ದುಬಾರಿ ಶಿಕ್ಷಣ, ಹಾಗೆಯೇ ಮದುವೆ-ಮುಂಜಿವೆ, ಆರೋಗ್ಯ ಮುಂತಾದವುಗಳ ಖರ್ಚು-ವೆಚ್ಚಗಳನ್ನು ನೀಗಿಸುವುದು ರೈತರಿಗೆ ಸವಾಲಾಗಿ ಪರಿಣಮಿಸಿವೆ. ಇಂಥ ಸಂದರ್ಭದಲ್ಲಿ ಸರಕಾರಗಳು ಮೀನ-ಮೇಷ ಮಾಡದೇ ತಕ್ಷಣ ರೈತರ ಸಮಸ್ಯೆಗಳಿಗೆ ಸ್ಪಂದಿಸಬೇಕಾದುದು ಕರ್ತವ್ಯ.

ಆಳುವ ಸರಕಾರಗಳೇ ರೈತರ ಗೋಳನ್ನು ಕೇಳದಿದ್ದರೆ ರೈತರು ಯಾರ ಮೊರೆ ಹೋಗಬೇಕು, ರೈತರು ಸರಕಾರಗಳಿಗೆ ಯೋಗ್ಯ ಬೆಲೆ ನೀಡಬೇಕೆಂದು ಕೇಳುವುದು ನ್ಯಾಯೋಚಿತವಾಗಿದೆ. ಕರ್ನಾಟಕದ ಎಲ್ಲಾ ಲಿಂಗಾಯತ ಮಠಾಧಿಪತಿಗಳು ರೈತ ಹೋರಾಟದ ಸಂದರ್ಭಗಳಲ್ಲಿ ಸದಾ ಅನ್ನದಾತರನ್ನು ಬೆಂಬಲಿಸುತ್ತಾ ಬಂದಿದ್ದಾರೆ. ಈಗಲೂ ಅನ್ನದಾತರ ಬೆನ್ನಿಗೆ ನಿಂತಿದ್ದಾರೆ. ಸರಕಾರಗಳು, ಜನಪ್ರತಿನಿಧಿಗಳು ಪರಸ್ಪರ ದೋಷಾರೋಪಣೆ ನಿಲ್ಲಿಸಿ ತುರ್ತಾಗಿ ರೈತರ ಬೇಡಿಕೆಗಳನ್ನು ಈಡೇರಿಸಬೇಕು. ಅನ್ಯಥಾ ಸಂಭವನೀಯ ಅನಾಹುತಕ್ಕೆ ಸರಕಾರಗಳೇ ಹೊಣೆಯಾಗಬೇಕಾಗುವುದು ಎಂದು ಲಿಂಗಾಯತ ಮಠಾಧಿಪತಿಗಳ ಒಕ್ಕೂಟದ ಪರವಾಗಿ ಶ್ರೀಗಳು ಪ್ರಕಟಣೆಯಲ್ಲಿ ಎಚ್ಚರಿಸಿದ್ದಾರೆ.

## ಪ್ರಿಯಕರನ ಕಿರುಕುಳಕ್ಕೆ ಬೇಸತ್ತು ಪ್ರೇಯಸಿ ಸೂಸೈಡ್!



■ವಿಜಯಸಾಕ್ಷಿ ಸುದ್ದಿ, ಹಾಸನ

ರಾಜಧಾನಿ ಬೆಂಗಳೂರಿನ ಪೀಣ್ಯಾ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಪ್ರಿಯಕರನ ಕಿರುಕುಳಕ್ಕೆ ಬೇಸತ್ತು ಪ್ರೇಯಸಿಯೊಬ್ಬಳು ಆತ್ಮಹತ್ಯೆಗೆ ಶರಣಾಗಿರುವ ಘಟನೆ ಜರುಗಿದೆ.

21 ವರ್ಷದ ಪ್ರಿಯಾಂಕ ಮೃತ ಯುವತಿ. 19 ವರ್ಷದ ಸುಮಂತ್ ಎನ್ನುವಾತನೇ ಪ್ರಿಯಾಂಕಾಗೆ ಕಿರುಕುಳ ನೀಡಿ ಆತ್ಮಹತ್ಯೆಗೆ ಪ್ರಚೋದನೆ ಕೊಟ್ಟ ಪ್ರಿಯಕರ. ತನಗಿಂತ ಚಿಕ್ಕವನ ಪ್ರೇಮದ ಬಲೆಯಲ್ಲಿ ಬಿದ್ದು ಪ್ರಿಯಾಂಕ ದುರಂತ ಅಂತ್ಯ ಕಂಡಿದ್ದಾಳೆ. ಆದ್ರೆ, ಘಟನೆ ನಡೆದು ವಾರ ಕಳೆದರೂ ಕಿರುಕುಳ, ಆತ್ಮಹತ್ಯೆಗೆ ಪ್ರಚೋದನೆ ನೀಡಿದ್ದ ಪ್ರಿಯಕರನ ಬಂಧನವಾಗಿಲ್ಲ. ಯುವತಿ ಪ್ರಿಯಾಂಕ ಹೆತ್ತವರು ಕಣ್ಣೀರುಡುತ್ತಿದ್ದಾರೆ.

ಪ್ರಿಯಾಂಕ ಅವರು ತಾಯಿ ಶೋಭಾ ತಂದೆ ಜಯರಾಂ ನಾಯಕ್ ಜೊತೆಗೆ ಬೆಂಗಳೂರಿನ ನೆಲಗದ್ದರಹಳ್ಳಿಯಲ್ಲಿ ನೆಲೆಸಿದ್ದಳು. ಮೂರು ತಿಂಗಳ ಹಿಂದಷ್ಟೇ ಡಿಪ್ಲೊಮಾ ಮುಗಿಸಿ ತಾಯಿ ಕೆಲಸ ಮಾಡೋ ಖಾಸಗಿ ಕಂಪನಿಯಲ್ಲೇ ಅಕೌಂಟೆಂಟ್ ಆಗಿ ಕೆಲಸಕ್ಕೆ ಸೇರಿಕೊಂಡಿದ್ದಳು. ಆದ್ರೆ, ಪ್ರಿಯಾಂಕ, ಹಾಸನ ಜಿಲ್ಲೆ ಆಲೂರು ತಾಲ್ಲೂಕು ಮೂಲದ ಪಾಪಿ ಸುಮಂತ್ ನ ಪ್ರೇಮ ಪಾಶಕ್ಕೆ ಸಿಲುಕಿದ್ದಳು. ಮಗಳ ಲವ್ ವಿಚಾರ ಗೊತ್ತಾಗಿ ▸▸3ನೇ ಪುಟಕ್ಕೆ

## HRMS 2.0, KASS ಕುರಿತ ಕಾರ್ಯಾಗಾರ

■ವಿಜಯಸಾಕ್ಷಿ ಸುದ್ದಿ, ಗದಗ


ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಖಜಾನೆ ಇಲಾಖೆ ಗದಗ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಶಾಖೆ ಗದಗ ಇವರ ಆಶ್ರಯದಲ್ಲಿ ಊಖಒಖ ತಂತ್ರಾಂಶ-2.0 ಹಾಗೂ ಏಂಖಖ ಕುರಿತ ಕಾರ್ಯಾಗಾರ ನವೆಂಬರ್ 10ರಂದು ಬೆಳಿಗ್ಗೆ 10.30ಕ್ಕೆ ಜಿಲ್ಲಾಧಿಕಾರಿಗಳ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಜರುಗಲಿದೆ.

ಈ ಕಾರ್ಯಾಗಾರದಲ್ಲಿ ಗದಗ ಜಿಲ್ಲೆಯ ಎಲ್ಲಾ DDO ಗಳು ಹಾಗೂ ಇಖಖ ವಿಭಾಗದ ಸಿಬ್ಬಂದಿ ಭಾಗವಹಿಸಲಿದ್ದಾರೆ. HRMS-2.0ನ ಹೊಸ ಪರಿಷ್ಕೃತ ಮಾದರಿ, ESR ಹಾಗೂ KASS ಮತ್ತು ESS ಕುರಿತ ತಾಂತ್ರಿಕ ತರಬೇತಿ ಈ ಸಂದರ್ಭದಲ್ಲಿ ನೀಡಲಾಗುವುದು.

ಕಾಂುರ್ಾಗಾರದಲ್ಲಿ ನೀಲಮಾ ಬಿ, ಯೋಜನಾಧಿಕಾರಿ (ಬೆಂಗಳೂರು), HRMS-2.0 ಮತ್ತು ಪರಿಚಯ/ESR ಕುರಿತು ಬೆಳಿಗ್ಗೆ 10.30ರಿಂದ ಮಧ್ಯಾಹ್ನ 12.30ರವರೆಗೆ ಮಾರ್ಗದರ್ಶನ ನೀಡಲಿದ್ದಾರೆ.

ಮಧ್ಯಾಹ್ನ 12.30ರಿಂದ 1.30ರವರೆಗೆ ಸುಧಾಮಣಿ, ಂುೋಜನಾಧಿಕಾರಿಗಳು (ಬೆಂಗಳೂರು) KASS ಮತ್ತು ESS ಕುರಿತು ಮಾತನಾಡಲಿದ್ದಾರೆ. ಮಧ್ಯಾಹ್ನ 2.30ರಿಂದ 4.30ರವರೆಗೆ ಸುಮಂತ್, ತಾಂತ್ರಿಕ ತರಬೇತುದಾರರು (ಬೆಂಗಳೂರು) HRMS-2.0 Module ಕುರಿತು ತರಬೇತಿ ನೀಡಲಿದ್ದಾರೆ.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಎಸ್. ಷಡಾಕ್ಷರಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಗದಗ ಜಿಲ್ಲಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ ಭಾಗವಹಿಸಲಿದ್ದಾರೆ.



ಈ ಕಾರ್ಯಾಗಾರದಲ್ಲಿ ಭಾಗವಹಿಸುವ ಎಲ್ಲ ಅಧಿಕಾರಿ/ಸಿಬ್ಬಂದಿಗಳಿಗೆ ಒಂದು ದಿನದ OOD ಸೌಲಭ್ಯವಿದೆ. ಈ ಕಾರ್ಯಾಗಾರದ ಸದುಪಯೋಗವನ್ನು ಸರ್ಕಾರಿ ಅಧಿಕಾರಿಗಳು, ನೌಕರರು ಪಡೆಯಬೇಕು ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಗದಗ ಜಿಲ್ಲಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ ನೌಕರ ಭಾಂದವರಲ್ಲಿ ಮನವಿ ಮಾಡಿದ್ದಾರೆ.

# ರಾಜ್ಯೋತ್ಸವ ಕವಿಗೋಷ್ಠಿ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ನ. 8ರಂದು ಸಂಜೆ 6.30ಕ್ಕೆ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನ, ಕಸಾಪ ಕಾರ್ಯಾಲಯದಲ್ಲಿ 70ನೇ ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ಕವಿಗೋಷ್ಠಿಯುನ್ನು ಆಯೋಜಿಸಲಾಗಿದೆ.

ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ಡಾ. ಶಿವಪ್ಪ ಕುರಿ ಕಾರ್ಯಕ್ರಮ ಉದ್ಘಾಟಿಸುವರು. ಹಿರಿಯ ಕವಿ ಎ.ಎಸ್. ಮಕಾನದಾರ ಆಶಯ ನುಡಿಗಳನ್ನಾಡುವರು. ಕವಿಗಳಾದ ಮಂಜುಳಾ ವೆಂಕಟೇಶಯ್ಯ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಅಧ್ಯಕ್ಷತೆ ವಹಿಸುವರು.

ಕವಿಗೋಷ್ಠಿಯಲ್ಲಿ ಡಾ. ರಾಜೇಂದ್ರ ಗಡಾದ ಶಿಲ್ಪಾ ಮ್ಯಾಗೇರಿ, ಡಾ. ಅಶೋಕ ಮತ್ತಿಗಟ್ಟಿ, ಡಾ. ಕಲ್ಲೇಶ ಮೂರಶಿಳ್ಳಿನ, ಡಾ. ರಶ್ಮಿ ಅಂಗಡಿ, ಜ್ಯೋತಿ ಹೇರಲಗಿ, ನೀಲಮ್ಮ ಅಂಗಡಿ, ಶಾರದಾ ಬಾಣದ, ಜಯಶ್ರೀ ಅಂಗಡಿ, ಕಸ್ತೂರಿ ಕಡಗದ, ಶಿವಾನಂದ ಭಜಂತ್ರಿ, ಜೆ.ಎ. ಪಾಟೀಲ, ರಾಹುಲ ಗಿಡ್ನಂದಿ, ರಾಜಶೇಖರ ಕಾಲವಾಡಮಠ ಮೊದಲಾದವರು ಭಾಗವಹಿಸುವರು.

ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು, ಸಾಹಿತಿಗಳು, ಪರಿಷತ್ತಿನ ಸದಸ್ಯರು ಭಾಗವಹಿಸಬೇಕೆಂದು ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ, ಡಿ.ಎಸ್. ಬಾಪುರಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

### ನ. 9ರಿಂದ 17ರವರೆಗೆ ನರೇಗಲ್ಲ ಹಿರೇಮಠದ ಜಾತ್ರಾ ಮಹೋತ್ಸವ

# ನ. 16ರಂದು ಕಾಶಿ ಜಗದ್ಗುರುಗಳು ನರೇಗಲ್ಲಿಗೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನವೆಂಬರ್ 16ರಂದು ಕಾಶಿ ಜಂಗಮವಾಡಿ ಮಠದ ಶ್ರೀಮದ್ ಕಾಶಿ ಜ್ಞಾನ ಸಿಂಹಾಸನಾಧೀಶ್ವರ ಶ್ರೀ 1008 ಜಗದ್ಗುರು ಡಾ. ಚಂದ್ರಶೇಖರ ಶಿವಾಚಾರ್ಯ ಮಹಾಸ್ವಾಮಿಗಳವರು ನರೇಗಲ್ಲ ಹಿರೇಮಠದ ಜಾತ್ರಾ ಮಹೋತ್ಸವಕ್ಕೆ ಆಗಮಿಸಲಿದ್ದಾರೆ ಎಂದು ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶ್ರೀಗಳು ತಿಳಿಸಿದರು.

ನ. 9ರಿಂದ 17ರವರೆಗೆ ನಡೆಯುವ ಜಾತ್ರಾಮಹೋತ್ಸವದ ವಿವರಗಳನ್ನು ನೀಡಲು ಶ್ರೀಮಠದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ನ. 9ರಂದು ಸಂಜೆ 6ಕ್ಕೆ ಪುರಾಣ ಪ್ರವಚನಗಳ ಉದ್ಘಾಟನೆ ನಡೆಯಲಿದ್ದು, ತಾಲೂಕಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಮಿಥುನ ಪಾಟೀಲ ಉದ್ಘಾಟಿಸಲಿದ್ದಾರೆ. ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ, ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ಸ್ಥಾಯಿ ಸಮಿತಿ ಚೇರಮನ್ ಮುತ್ತಪ್ಪ ನೂಲ್ಕಿ, ಪ.ಪಂ ಪುರುಷ ಸದಸ್ಯರು, ಮುಖ್ಯಾಧಿಕಾರಿ ಮಹೇಶ ನಿಡಶೇಶಿ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಬಸವನಕೊಪ್ಪದ ಗದಿಗಯ್ಯ ಗವಾಯಿಗಳು ಮತ್ತು ತಂಡ ಸಂಗೀತ ಸೇವೆ ನೀಡಲಿದ್ದಾರೆ.

ನ. 10ರಂದು ಧುರೀಣ ರವಿ ದಂಡಿನ, ಬಿಜೆಪಿ ಮುಖಂಡ ಉಮೇಶ ಪಾಟೀಲ, ನಿ.ಶಿ. ಬಸವನಗೌಡ ಮಲ್ಲನಗೌಡ್ರ, ಕಳಕನಗೌಡ ಪಾಟೀಲ, ರಾಜು ಮಣ್ಣೊಡ್ಡರ, ಡಾ. ಎಲ್.ಎನ್. ಗ್ರಾಮಪುರೋಹಿತ, ನಾರಾಯಣ ವಡ್ಡಟ್ಟಿ, ಡಾ. ಕೃಷ್ಣ ಕಾಳೆ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ನ. 11ರಂದು ಗುರುಪಾದಪ್ಪ ಬೆಲ್ಲದ, ಶಿವಯೋಗಿ ಜಕ್ಕಲಿ, ಮುತ್ತಣ್ಣ ಪಲ್ಲೇದ, ಬಾಳಪ್ಪ ಸೋಮಗೊಂಡ, ಶಶಿಧರ ಓದುಸುಮಠ, ರಮೇಶ ಬೆಂಡಿಕಾಯಿ, ಸೋಮಣ್ಣ ಲಕ್ಕನಗೌಡ್ರ, ಬಸಪ್ಪ ಮಡಿವಾಳರ ಅತಿಥಿಗಳಾಗಿ ಆಗಮಿಸಲಿದ್ದಾರೆ.



ನ. 12ರಂದು ಶ್ರೀ ವೀರಭದ್ರೇಶ್ವರ-ಭದ್ರಕಾಳಿ ವಿವಾಹ ಮಹೋತ್ಸವವು ಜರುಗಲಿದ್ದು, ನಿಡಗುಂದಿಕೊಪ್ಪದ ಶ್ರೀ ಅಭಿನವ ಚನ್ನಬಸವ ಮಹಾಸ್ವಾಮಿಗಳು ಸಾನ್ನಿಧ್ಯ, ಮುಖಂಡ ಸಿದ್ದಣ್ಣ ಬಂಡಿ, ಸಂದೇಶ ದೊಡ್ಡಮೇಟಿ, ಅತಿಥಿಗಳಾಗಿ ಪಾಲ್ಗೊಳ್ಳುವರು. ಶಶಿಧರ ಹೊಟ್ಟಿನ, ಶರಣಪ್ಪ ನಾಶಿಪುಡಿಯವರನ್ನು ಸನ್ಮಾನಿಸಲಾಗುವುದು.

ನ. 13ರಂದು ಮುಖಂಡ ಅಕ್ಷಯ ಪಾಟೀಲ, ಅಂಜುಮನ್ ಇಸ್ಲಾಂ ಕಮಿಟಿಯ ಅಧ್ಯಕ್ಷ ಫಕ್ರುಸಾಬ ರೇವಡಿಗಾರ, ಮೈಲಾರಪ್ಪ ಚಳ್ಳಮರದ, ಅಲ್ಲಾಭಕ್ಷಿ ನದಾಫ್, ಶೇಖಪ್ಪ ಕೆಂಗಾರ, ಖಾದರಬಾಷಾ ಹೂಲಗೇರಿ ಅತಿಥಿಗಳಾಗಿ ಆಗಮಿಸಲಿದ್ದಾರೆ. ನ. 14ರಂದು ಅನ್ನಪೂರ್ಣೇಶ್ವರಿ ಮಹಿಳಾ ಮಂಡಳದ ವಾರ್ಷಿಕೋತ್ಸವ ಜರುಗಲಿದ್ದು, ಅಧ್ಯಕ್ಷೆ ಕಸ್ತೂರಿಬಾಯಿ ಧನ್ನೂರ ಅಧ್ಯಕ್ಷತೆ ವಹಿಸುವರು. ಸಂಯುಕ್ತಾ ಬಂಡಿ, ಮಂಜುಳಾ ರೇವಡಿ, ಪಿಎಸ್ಐ ಐಶ್ವರ್ಯ ನಾಗರಾಳ, ನರೇಗಲ್ಲ ಪ.ಪಂ ಮಹಿಳಾ ಸದಸ್ಯೆಯರು ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಜಾತ್ರಾ ಕಾರ್ಯಕ್ರಮದ 9 ದಿನಗಳೂ ಅನ್ನಪೂರ್ಣೇಶ್ವರಿ ದೇವಿಗೆ ಕುಂಕುಮಾರ್ಚನೆ, ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮಗಳು ನಡೆಯಲಿವೆ.

ನ. 15ರಂದು ಮುತ್ತಣ್ಣ ಕಡಗದ, ಶಶಿಧರ ಸಂಕನಗೌಡ್ರ, ಉಮೇಶ ಸಂಗನಾಳಮಠ, ನಿಂಗಪ್ಪ ಕಣವಿ, ಕಲ್ಮೇಶ ತೊಂಡಿಹಾಳ ಅತಿಥಿಗಳಾಗಿ ಆಗಮಿಸಲಿದ್ದು, ಶಿವಯ್ಯ ಮಾಲಗಿತ್ತಿಮಠ ತಂಡದವರಿಂದ ಸಂಗೀತ ಸೇವೆ ಜರುಗಲಿದೆ.

ನ. 16ರಂದು ನಡೆಯುವ ಪುರಾಣ ಮಂಗಲ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಕಾಶಿ ಜಗದ್ಗುರುಗಳು ವಹಿಸಲಿದ್ದು, ಷ.ಬ್ರ. ಶ್ರೀ ವೀರಭದ್ರ ಶಿವಾಚಾರ್ಯರು ಸಿದ್ದರಬೆಟ್ಟ-ಅಬ್ಬಿಗೇರಿ ನೇತೃತ್ವ ವಹಿಸಲಿದ್ದಾರೆ. ಶಾಸಕ ಜಿ.ಎಸ್. ಪಾಟೀಲ, ಡಾ. ಕೆ.ಬಿ. ಧನ್ನೂರ, ಶಿವನಗೌಡ ಪಾಟೀಲ, ನಿಂಗನಗೌಡ ಲಕ್ಕನಗೌಡ್ರ, ಶೇಖರಪ್ಪ ಮುತ್ತೇನವರ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಇದೇ ಸಂದರ್ಭದಲ್ಲಿ ಡಾ. ಬಿ.ವಿ. ಶಿರೂರ ಬರೆದಿರುವ 'ಪಂ. ಕಾಶಿನಾಥಶಾಸ್ತ್ರಿಗಳು ಗಚ್ಚಿನಮಠ' ಹಾಗೂ ಕಾಶಿನಾಥ ಸಾಲಿಮಠ ಬರೆದಿರುವ 'ಕಾಶಿ ದರ್ಶನ' ಗ್ರಂಥಗಳು ಲೋಕಾರ್ಪಣೆಗೊಳ್ಳಲಿವೆ.

ನ. 17ರಂದು ಬೆಳಿಗ್ಗೆ 6ಕ್ಕೆ ಅಯ್ಯಾಚಾರ, ಇಷ್ಟಲಿಂಗ ದೀಕ್ಷೆ ಜರುಗಲಿದ್ದು, ಶ್ರೀ ಮಳೆ ಮಲ್ಲೇಶ್ವರ ಗದ್ದುಗೆಗೆ ರುದ್ರಾಭಿಷೇಕ, ಬಿಲ್ವಾರ್ಚನೆ ನಡೆಯಲಿದೆ. 9ಕ್ಕೆ ಗುರುಗಳ ಭಾವಚಿತ್ರ ಹಾಗೂ ಧರ್ಮ ಗ್ರಂಥಗಳ ಪಲ್ಲಕ್ಕಿ ಉತ್ಸವ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಾಗಿ ಬಂದು ಅನ್ನ ಸಂತರ್ಪಣೆಯೊಂದಿಗೆ ಜಾತ್ರಾ ಮಹೋತ್ಸವ ಸಂಪನ್ನಗೊಳ್ಳಲಿದೆ ಎಂದು ಶ್ರೀಗಳು ತಿಳಿಸಿದರು.

# 'ನಾವು ರೈತರ ಪರವಾಗಿ ನಿಲ್ಲುತ್ತೇವೆ, ಸಮಸ್ಯೆ ಬಗೆಹರಿಸಲು ಕೇಂದ್ರವೂ ಸಿದ್ಧವಾಗಬೇಕು': ಸಿಎಂ ಸಿದ್ದರಾಮಯ್ಯ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕಬ್ಬು ಬೆಳೆಗಾರರಿಗೆ ನೆರವಾಗುವುದು ರಾಜ್ಯ ಹಾಗೂ ಕೇಂದ್ರ ಸರ್ಕಾರಗಳ ಜವಾಬ್ದಾರಿಯಾಗಿದೆ. ರೈತರ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಎಫ್.ಆರ್.ಪಿ ನಿಗದಿಪಡಿಸುವುದು ಕೇಂದ್ರ ಸರ್ಕಾರದ ಕಾರ್ಯ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.



ನವೆಂಬರ್ 7, ಶುಕ್ರವಾರ ವಿಧಾನಸೌಧ ಸಭಾಂಗಣದಲ್ಲಿ ನಡೆದ ಸಕ್ಕರೆ ಕಾರ್ಖಾನೆ ಮಾಲಿಕರ ಸಭೆಯಲ್ಲಿ ಮಾತನಾಡಿದ ಅವರು ಕೇಂದ್ರ ಸರ್ಕಾರ ದಿನಾಂಕ 2025 ಮೇ 6ರಂದು ಎಫ್ಐಆರ್.ಪಿ ನಿಗದಿಪಡಿಸಿದೆ. ಈ ಎಫ್.ಆರ್.ಪಿಯಲ್ಲಿ ಸಾಗಾಟ ಮತ್ತು ಕಟಾವು ವೆಚ್ಚ ಸಹ ಸೇರಿದೆ. ಸಕ್ಕರೆಯ ಎಂ.ಎಸ್.ಪಿ ಹೆಚ್ಚಳ ಮಾಡುವಂತೆ ಈ ಹಿಂದೆಯೇ ಕೇಂದ್ರ ಸರ್ಕಾರಕ್ಕೆ ನಾವು ಮನವಿ ಸಲ್ಲಿಸಿದ್ದೇವೆ. ಇದೀಗ ಕೇಂದ್ರ ಸರ್ಕಾರ ಸಮಸ್ಯೆ ಹುಟ್ಟು ಹಾಕಿದೆ ಎಂದು ಹೇಳಿದರು.

ಇದೇ ವೇಳೆ ಸಕ್ಕರೆ ಕಾರ್ಖಾನೆಗಳು ಮಾರಾಟ ಮಾಡುವ ವಿದ್ಯುತ್ ಮೇಲೆ ಪ್ರತಿ ಯುನಿಟ್ಗೆ 60 ಪೈಸೆ ತೆರಿಗೆ ನಿಗದಿಪಡಿಸುವ ಪ್ರಸ್ತಾವನೆಯನ್ನು ಮರು ಪರಿಶೀಲಿಸಲಾಗುವುದು ಎಂದರು.

ಸಭೆಯಲ್ಲಿ ತಮ್ಮ ಸಮಸ್ಯೆ ಹೇಳಿಕೊಂಡ ಕಾರ್ಖಾನೆ ಮಾಲೀಕರು ಸಕ್ಕರೆ ಉತ್ಪಾದನೆ ಮತ್ತು ಮಾರಾಟ, ಎಥೆನಾಲ್ ಉತ್ಪಾದನೆ ಮತ್ತು ಬೆಲೆ ನಿಗಧಿ, ಸಕ್ಕರೆ ರಫ್ತು ಮತ್ತು ಬೆಲೆ ನಿಗಧಿ ಎಲ್ಲವೂ ಕೇಂದ್ರ ಸರ್ಕಾರದ ಕೈಯಲ್ಲಿದೆ. ಕೇಂದ್ರದ ನೀತಿಯಿಂದ ದಕ್ಷಿಣ ಭಾರತದ ಕಾರ್ಖಾನೆಗಳು ಸಮಸ್ಯೆಯಲ್ಲಿವೆ, ಉತ್ತರ ಭಾರತದ ಕಾರ್ಖಾನೆಗಳು ಅನುಕೂಲಕರವಾಗಿವೆ ಎಂದು ಆರೋಪಿಸಿದರು. ಈ ವೇಳೆ ರೈತರ ಬೇಡಿಕೆ ಈಡೇರಿಸುವುದರಲ್ಲಿ ಕೇಂದ್ರ ಸರ್ಕಾರದ ಜವಾಬ್ದಾರಿ ಪ್ರಮುಖವಾಗಿವೆ ಮತ್ತು ಕಾರ್ಖಾನೆಗಳ ಜವಾಬ್ದಾರಿಯು ಇದೆ ಎಂದು ಸಿದ್ದರಾಮಯ್ಯ ಅಭಿಪ್ರಾಯ ಪಟ್ಟರು. ಹಾಗೆ ಕಾರ್ಖಾನೆ ಮಾಲೀಕರ ಸಮಸ್ಯೆಗಳಲ್ಲಿ ರಾಜ್ಯ ಸರ್ಕಾರದ ವ್ಯಾಪ್ತಿಗೆ ಬರುವ ಸಮಸ್ಯೆಗಳನ್ನು ಬಗೆಹರಿಸುವ ಬಗ್ಗೆಯೂ ಪರಿಶೀಲಿಸೋಣ ಎಂದು ಭರವಸೆ ನೀಡಿದರು.

ಸಭೆಯಲ್ಲಿ ಸಕ್ಕರೆ ಕಾರ್ಖಾನೆ ಮಾಲಿಕರ ಪರವಾಗಿ ಮಾತನಾಡಿದ ಮುರುಗೇಶ್ ನಿರಾಣಿ, ಎಲ್ಲಾ ಸರ್ಕಾರಗಳಲ್ಲೂ ಕಬ್ಬು ಬೆಳೆಗಾರರ ಸಮಸ್ಯೆ ಮುಂದುವರೆಯುತ್ತಾ ಬಂದಿದೆ. ಸಕ್ಕರೆ ಕಾರ್ಖಾನೆಗಳಿಂದ ವಿದ್ಯುತ್ ಖರೀದಿ ಒಪ್ಪಂದವನ್ನು ರಾಜ್ಯ ಸರ್ಕಾರ ನವೀಕರಣ ಮಾಡಿರುವುದಿಲ್ಲ. ಮಹಾರಾಷ್ಟ್ರದಲ್ಲಿ ಸಕ್ಕರೆ ಕಾರ್ಖಾನೆಯವರಿಂದ ಖರೀದಿಸುವ ವಿದ್ಯುತ್ ಪ್ರತಿ ಯುನಿಟ್ಗೆ ರೂ. 6 ಪಾವತಿಸಲಾಗುತ್ತಿದೆ. ಇದೇ ಮಾದರಿಯಲ್ಲಿ ರಾಜ್ಯ ಸರ್ಕಾರ ಒಪ್ಪಂದ ಮಾಡಬೇಕಿದೆ. ಕಾರ್ಖಾನೆಗಳು ಮಾರಾಟ ಮಾಡುವ ವಿದ್ಯುತ್ ಮೇಲೆ ಪ್ರತಿ ಯುನಿಟ್ಗೆ 60 ಪೈಸೆ ತೆರಿಗೆ ನಿಗದಿಪಡಿಸಿರುವುದನ್ನು ಕೈಬಿಡಬೇಕು. ಸಕ್ಕರೆ ಕಾರ್ಖಾನೆಗಳ ನಡುವಿನ ಅಂತರ ಕನಿಷ್ಠ 25 ಕಿಮೀ ನಿಗದಿಪಡಿಸಬೇಕು. ಏವಿಯೇಷನ್ ಇಂಧನಕ್ಕೆ ಎಥೆನಾಲ್ ಮಿಶ್ರಣ ಅನುಮತಿಯನ್ನು ಆದಷ್ಟು ಬೇಗನೆ ನೀಡುವಂತೆ ಪ್ರಧಾನಿ ಅವರಿಗೆ ಮನವಿ ಮಾಡಬೇಕು. ಪ್ರಸ್ತುತ ರೈತರಿಗೆ ಎಫ್ಐರ್.ಪಿ ಪ್ರಕಾರ ದರ ನೀಡಲಾಗುವುದು. ಹೆಚ್ಚುವರಿ ಆದಾಯ ಸಾಧ್ಯವಾದರೆ ಸೀಸನ್ ಮುಗಿದ ಬಳಿಕ ಅದನ್ನು ರೈತರಿಗೆ ಹಂಚಿಕೆ ಮಾಡಲು ಸಿದ್ಧರಿದ್ದೇವೆ ಎಂದರು.

ಎಥೆನಾಲ್ ಎಂಎಸ್.ಪಿ ಹೆಚ್ಚಳ ಕುರಿತು ಕೇಂದ್ರಕ್ಕೆ ಮನವಿ ಮಾಡಿದರೂ ಇದುವರೆಗೆ ಹೆಚ್ಚಳ ಮಾಡಿಲ್ಲ. ಇದರಿಂದ ಕರ್ನಾಟಕ ರಾಜ್ಯಕ್ಕೆ ನಿರಂತರವಾಗಿ ಅನ್ಯಾಯವಾಗಿದೆ. ಇದೇ ರೀತಿ ಸಕ್ಕರೆ ರಫ್ತಿನ ಮೇಲೆ ನಿರ್ಬಂಧ ಹೇರಿರುವುದರಿಂದ ಸಕ್ಕರೆ ಕಾರ್ಖಾನೆಗಳಿಗೆ ಆರ್ಥಿಕವಾಗಿ ನಷ್ಟ ಉಂಟಾಗಿದೆ. ಇಡೀ ದೇಶಕ್ಕೆ ಕೇವಲ 10ಲಕ್ಷ ಮೆಟ್ರಿಕ್ ಟನ್ ಮಾತ್ರ ರಫ್ತಿಗೆ ಅನುಮತಿ ನೀಡಲಾಗಿದೆ. ಕಳೆದ ಆರು ವರ್ಷಗಳಿಂದ ಸಕ್ಕರೆ ದರವನ್ನು ಸಹ ಪರಿಷ್ಕರಿಸಿಲ್ಲ. ಆದರೆ ಕಬ್ಬಿನ ದರ ಪ್ರತಿ ವರ್ಷ ಹೆಚ್ಚುತ್ತಾ ಹೋಗುತ್ತಿದೆ. ಈ ಎಲ್ಲಾ ಕಾರಣಗಳಿಂದ ಸಕ್ಕರೆ ಕಾರ್ಖಾನೆಗಳಿಗೆ ಈಗ ಎಫ್ಐರ್.ಪಿ ಪ್ರಕಾರ ರೈತರಿಗೆ ಪಾವತಿ ಮಾಡಲು ಕಷ್ಟ ಪಡಬೇಕಾದ ಪರಿಸ್ಥಿತಿಯಿದೆ. ಆದರೆ ಈ ದರ ಕಾನೂನಾತ್ಮಕವಾಗಿ ನೀಡಬೇಕಾಗಿರುವ ಹಿನ್ನೆಲೆಯಲ್ಲಿ ಕಾರ್ಖಾನೆಗಳು ಪಾವತಿಸುತ್ತಿವೆ ಎಂದು ಸಕ್ಕರೆ ಕಾರ್ಖಾನೆ ಮಾಲಿಕರ ಸಂಘದ ಅಧ್ಯಕ್ಷರು ತಿಳಿಸಿದರು.

# ತೆಲಂಗಾಣವನ್ನು ಮುಸ್ಲಿಂ ರಾಜ್ಯವನ್ನಾಗಿಸಲು ರೇವಂತ್ ರೆಡ್ಡಿ- ಓವೈಸಿ ಯೋಜಿಸುತ್ತಿದ್ದಾರೆ: ಕೇಂದ್ರ ಸಚಿವ ಬಂಡಿ ಸಂಜಯ್ ಕುಮಾರ್

■ವಿಜಯಸಾಕ್ಷಿ ಸುದ್ದಿ, ತೆಲಂಗಾಣ

ಬಿಜೆಪಿ ನಾಯಕ ಮತ್ತು ಗೃಹ ವ್ಯವಹಾರಗಳ ರಾಜ್ಯ ಸಚಿವ ಬಂಡಿ ಸಂಜಯ್ ಕುಮಾರ್ ದ್ವೇಷ ಭಾಷಣ ಮಾಡಿದ್ದು, ಮುಖ್ಯಮಂತ್ರಿ ಎ. ರೇವಂತ್ ರೆಡ್ಡಿ ಮತ್ತು ಎಐಎಂಐಎಂ ಮುಖ್ಯಸ್ಥ ಅಸಾದುದ್ದೀನ್ ಓವೈಸಿ ತೆಲಂಗಾಣವನ್ನು ಮುಸ್ಲಿಂ ರಾಜ್ಯವನ್ನಾಗಿ ಮಾಡಲು ಪಿತೂರಿ ನಡೆಸುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.



2047 ರ ವೇಳೆಗೆ ಭಾರತವನ್ನು ಮುಸ್ಲಿಂ ದೇಶವನ್ನಾಗಿ ಪರಿವರ್ತಿಸುವ ಓವೈಸಿ ಅವರ ಕನಸಿನ ಬಗ್ಗೆ ಹಿಂದೂಗಳು ಜಾಗರೂಕರಾಗಿರಬೇಕು ಎಂದು ಬೋರಬಂಡಾದಲ್ಲಿ ಗುರುವಾರ ನಡೆದ ಪ್ರಚಾರದ ಸಂದರ್ಭದಲ್ಲಿ ಮಾತನಾಡಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷ ಎನ್. ರಾಮಚಂದರ್ ರಾವ್ ಅವರೊಂದಿಗೆ ಸಂಜಯ್, ಪಕ್ಷದ ಜುಬಿಲಿ ಹಿಲ್ಸ್ ಉಪಚುನಾವಣಾ ಅಭ್ಯರ್ಥಿ ಲಂಕಾಲಾ ದೀಪಕ್ ರೆಡ್ಡಿ ಪರ ಪ್ರಚಾರ ನಡೆಸಿದರು.

ಉಪಚುನಾವಣಾ ಪ್ರಚಾರದ ಸಮಯದಲ್ಲಿ ಮುಖ್ಯಮಂತ್ರಿ ರೇವಂತ್ ರೆಡ್ಡಿ ಮತ್ತು ಕಾಂಗ್ರೆಸ್ ನಾಯಕರು ತಲೆಗೆ ಟೋಪಿ ಧರಿಸಿದ್ದಕ್ಕಾಗಿ ಗುರಿಯಾಗಿಸಿಕೊಂಡ ಸಂಜಯ್, ಅಸಾದುದ್ದೀನ್ ಓವೈಸಿ ಅವರನ್ನು ಭಾಗ್ಯ ಲಕ್ಷ್ಮಿ ದೇವಸ್ಥಾನದಲ್ಲಿ ಪ್ರಾರ್ಥನೆ ಸಲ್ಲಿಸುವಂತೆ ಮಾಡಿ ಎಂದು ಸಿಎಂಗೆ ಸವಾಲು ಹಾಕಿದರು.

ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಸಂಜಯ್, ಕಾಂಗ್ರೆಸ್ ಅಭ್ಯರ್ಥಿ ನವೀನ್ ಯಾದವ್ ಅವರನ್ನು 'ನವೀನ್ ಖಾನ್' ಮತ್ತು ಬಿಆರ್ಎಸ್ ಅಭ್ಯರ್ಥಿ ಮಗಂತಿ ಸುನೀತಾ ಅವರನ್ನು 'ಸುನೀತಾ ಬೇಗಂ' ಎಂದು ಉಲ್ಲೇಖಿಸುವ ಮೂಲಕ ವಿವಾದವನ್ನು ಸೃಷ್ಟಿಸಿದರು.

"ಈ ಅಭ್ಯರ್ಥಿಗಳು ಗೆದ್ದರೆ, ಎಲ್ಲ ಸಮುದಾಯ ಭವನಗಳು ಮಸೀದಿಗಳಾಗಿ ಬದಲಾಗುತ್ತವೆ. ಬೀದಿಗಳಲ್ಲಿ ರಕ್ತ ಹರಿಯುತ್ತದೆ. ವಿನಾಯಕ ಚೌತಿ ಮತ್ತು ದಸರಾದಂತಹ ಹಬ್ಬಗಳನ್ನು ಇನ್ನು ಮುಂದೆ ಆಚರಿಸಲಾಗುವುದಿಲ್ಲ" ಎಂದು ಹೇಳಿದರು.

ಹಿಂದೂ ಮತದಾರರು ಬಿಜೆಪಿಗೆ ಬೆಂಬಲಿಸುವಂತೆ ಒತ್ತಾಯಿಸಿದ ಅವರು, ಮಾಜಿ ಮುಖ್ಯಮಂತ್ರಿ ಕೆ. ಚಂದ್ರಶೇಖರ್ ರಾವ್ (ಕೆಸಿಆರ್) ಹತ್ತು ವರ್ಷಗಳ ಕಾಲ ಜನರಿಗೆ ಕಿರುಕುಳ ನೀಡುತ್ತಿದ್ದಾರೆ. ಬಿಆರ್ಎಸ್ ಅನ್ನು ತೋಟದ ಮನೆಗೆ ಸೀಮಿತಗೊಳಿಸಬೇಕು ಎಂದು ಹೇಳಿದರು.

ಕಾಂಗ್ರೆಸ್ ಮತ್ತು ಬಿಆರ್ಎಸ್ ಪ್ರಸಾರ ಮಾಡುವ 'ನಕಲಿ ಸಮೀಕ್ಷೆ ವರದಿಗಳನ್ನು' ನಂಬಬೇಡಿ. ಆ ಪಕ್ಷಗಳಿಂದ ಹಣ ತೆಗೆದುಕೊಂಡು ಬಿಜೆಪಿಗೆ ಮತ ಹಾಕಿ ಎಂದು ಒತ್ತಾಯಿಸಿದರು.

# ವಂದೇ ಮಾತರಂ ವಾರ್ಷಿಕೋತ್ಸವ ಆರ್‌ಎಸ್‌ಎಸ್ ಪ್ರೇರಿತ ಹಿಂದುತ್ವ ಹೇರಿಕೆ: ಎಂಎಂಯು



■ವಿಜಯಸಾಕ್ಷಿ ಸುದ್ದಿ, ಕಾಶ್ಮೀರ

ಶಾಲೆಗಳು ವಂದೇ ಮಾತರಂನ 150 ನೇ ವಾರ್ಷಿಕೋತ್ಸವವನ್ನು ಆಚರಿಸುವಂತೆ ಕೇಳುವ ಸರ್ಕಾರದ ನಿರ್ದೇಶನವನ್ನು ಬಲವಾಗಿ ವಿರೋಧಿಸಿರುವ ಜಮ್ಮು-ಕಾಶ್ಮೀರದ ಪ್ರಮುಖ ಧಾರ್ಮಿಕ ಸಂಘಟನೆಗಳು ಮತ್ತು ವಿದ್ವಾಂಸರ ಒಕ್ಕೂಟವಾದ ಮುತಾಹಿದಾ ಮಜ್ಲಿಸ್-ಎ-ಉಲೇಮಾ (ಎಂಎಂಯು), "ಈ ಕ್ರಮವು ಸಾಂಸ್ಕೃತಿಕ ಆಚರಣೆಯ ಸೋಗಿನಲ್ಲಿ ಮುಸ್ಲಿಂ ಬಹುಸಂಖ್ಯಾತ ಪ್ರದೇಶದ ಮೇಲೆ ಆರ್‌ಎಸ್‌ಎಸ್ ಪ್ರೇರಿತ ಹಿಂದುತ್ವ ಸಿದ್ಧಾಂತವನ್ನು ಹೇರುವ ಪ್ರಯತ್ನ" ಎಂದು ಕರೆದಿದೆ.

ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಗುಂಪು, "ವಂದೇ ಮಾತರಂ ಒಳಗೊಂಡ ಸಂಗೀತ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸುವಂತೆ ಶಾಲೆಗಳಿಗೆ ನಿರ್ದೇಶಿಸುವ ಜಮ್ಮು ಮತ್ತು ಕಾಶ್ಮೀರ ಸಂಸ್ಕೃತಿ ಇಲಾಖೆಯ ಆದೇಶವು ಬಲವಂತ, ಅನ್ಯಾಯ ಮತ್ತು ಇಸ್ಲಾಮಿಕ್ ವಿರೋಧಿ. ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಮತ್ತು ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಅವರನ್ನು ಆದೇಶವನ್ನು ತಕ್ಷಣವೇ ಹಿಂಪಡೆಯಬೇಕು" ಎಂದು ಧಾರ್ಮಿಕ ಸಂಸ್ಥೆ ಒತ್ತಾಯಿಸಿದೆ.

"ಈ ನಿರ್ದೇಶನವು ಈ ಪ್ರದೇಶದ ಮುಸ್ಲಿಮರಲ್ಲಿ ತೀವ್ರ ದುಃಖವನ್ನುಂಟುಮಾಡಿದೆ, ಅವರು ಈ ಗಂಭೀರ ಕಳವಳವನ್ನು ವ್ಯಕ್ತಪಡಿಸಲು ಧಾರ್ಮಿಕ ನಾಯಕತ್ವವನ್ನು ಸಂಪರ್ಕಿಸುತ್ತಿದ್ದಾರೆ. ಮುಸ್ಲಿಂ ವಿದ್ಯಾರ್ಥಿಗಳು ಅಥವಾ ಸಂಸ್ಥೆಗಳು ತಮ್ಮ ನಂಬಿಕೆಗೆ ವಿರುದ್ಧವಾದ ಚಟುವಟಿಕೆಗಳಲ್ಲಿ ಭಾಗವಹಿಸುವಂತೆ ಒತ್ತಾಯಿಸುವುದು ಅನ್ಯಾಯ ಮತ್ತು ಸ್ವೀಕಾರಾರ್ಹವಲ್ಲ" ಎಂದು ಪ್ರತಿಪಾದಿಸಿದೆ.

150 ನೇ ವಾರ್ಷಿಕೋತ್ಸವದ ಅಂಗವಾಗಿ ಅಕ್ಟೋಬರ್ 31 ರಿಂದ ನವೆಂಬರ್ 7 ರವರೆಗೆ ವಿಶೇಷ ಸಭೆಗಳು ಮತ್ತು ಪ್ರದರ್ಶನಗಳನ್ನು ಆಯೋಜಿಸಲು ಸರ್ಕಾರದ ಸುತ್ತೋಲೆ ಶಾಲೆಗಳಿಗೆ ಸೂಚನೆ ನೀಡಿದೆ. ಜಮ್ಮು ಮತ್ತು ಕಾಶ್ಮೀರದ ಮುಖ್ಯ ಕಾರ್ಯದರ್ಶಿ ಈ ಹಿಂದೆ ಕೇಂದ್ರಾಡಳಿತ ಪ್ರದೇಶದಾದ್ಯಂತ ಶಾಲೆಗಳ ಭಾಗವಹಿಸುವಿಕೆಯನ್ನು ಖಚಿತಪಡಿಸಿಕೊಳ್ಳಲು ಸಭೆಯ ಅಧ್ಯಕ್ಷತೆ ವಹಿಸಿದ್ದರು, ವಿದ್ಯಾರ್ಥಿಗಳ ಒಳಗೊಳ್ಳುವಿಕೆ ವಿಶಾಲವಾದ ಸಂಪರ್ಕಕ್ಕೆ ನಿರ್ಣಾಯಕ ಎಂದು ಹೇಳಿದರು.

ವಂದೇ ಮಾತರಂ ಇಸ್ಲಾಮಿಕ್ ಬೋಧನೆಗಳಿಗೆ, ವಿಶೇಷವಾಗಿ ತೌಹೀದ್ ಅಥವಾ ದೇವರ ಏಕತೆಯ ಮೇಲಿನ ನಂಬಿಕೆಗೆ ಹೊಂದಿಕೆಯಾಗದ ಭಕ್ತಿಯ ಅಭಿವ್ಯಕ್ತಿಗಳನ್ನು ಒಳಗೊಂಡಿದೆ ಎಂದು ಎಂಎಂಯು ವಾದಿಸಿತು.

# ಕಬ್ಬಿಗೆ ಎಫ್‌ಆರ್‌ಪಿ ಹೆಚ್ಚಳಕ್ಕೆ ಆಗ್ರಹಿಸಿ ಪ್ರತಿಭಟನೆ; ಹಿಂಸಾಚಾರಕ್ಕೆ ತಿರುಗಿದ ರೈತರ ಹೋರಾಟ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಕಬ್ಬಿಗೆ ಎಫ್ಆರ್‌ಪಿ (ನ್ಯಾಯಯುತ ಮತ್ತು ಲಾಭದಾಯಕ ಬೆಲೆ) ಹೆಚ್ಚಳಕ್ಕೆ ಆಗ್ರಹಿಸಿ ಬೆಳಗಾವಿಯಲ್ಲಿ ರೈತರು ನಡೆಸುತ್ತಿರುವ ಪ್ರತಿಭಟನೆ ಹಿಂಸಾಚಾರಕ್ಕೆ ತಿರುಗಿದ್ದು, ರಾಷ್ಟ್ರೀಯ ಹೆದ್ದಾರಿ ತಡೆದು ಕಲ್ಲು ತೂರಾಟ ನಡೆಸಿದ್ದಾರೆ.

ನವೆಂಬರ್ 7 ರಂದು ಕರ್ನಾಟಕದ ಬೆಳಗಾವಿ ಜಿಲ್ಲೆಯ ಹತ್ತರಗಿ ಬಳಿ ಪುಣೆ-ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯನ್ನು ತಡೆದು ರೈತರು ಕಲ್ಲು ತೂರಾಟ ನಡೆಸಿದ ಬಳಿಕ ಹಲವಾರು ವಾಹನಗಳು ಹಾನಿಗೊಳಗಾದವು; ಯಾವುದೇ ಗಾಯದ ವರದಿಯಾಗಿಲ್ಲ.

ನವೆಂಬರ್ 6 ರಂದು, ಕಾರ್ಖಾನೆ ಪ್ರತಿನಿಧಿಗಳನ್ನು ಭೇಟಿಯಾದ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಲಾಭದಾಯಕ ಬೆಲೆಯನ್ನು ಘೋಷಿಸಲು ಅವಕಾಶ ನೀಡುವಂತೆ ರೈತ ಮುಖಂಡರಲ್ಲಿ ಮನವಿ ಮಾಡಿದರು.

ಇಂಚಗೇರಿ ಶಾಖಾ ಮಠದ ನಾಯಕರಾದ ಚುನಪ್ಪ ಪೂಜಾರಿ ಮತ್ತು ಶ್ರೀ ಶಶಿಕಾಂತ್ ಗುರೂಜಿ ಅವರು ಸಕ್ಕರೆ ಸಚಿವ ಶಿವಾನಂದ್ ಪಾಟೀಲ್ ಅವರಿಗೆ ಬಂದ್ ಅನ್ನು ಮುಂದೂಡುವುದಾಗಿ ಭರವಸೆ ನೀಡಿದ್ದರು. ಆದರೆ, ಲಾಭದಾಯಕ ಬೆಲೆ ಘೋಷಿಸುವವರೆಗೆ ಆಂದೋಲನವನ್ನು ಸ್ಥಗಿತಗೊಳಿಸುವುದಿಲ್ಲ ಎಂದು ಹೇಳಿದರು.

ಆದರೆ, ಕೊಲ್ಹಾಪುರ ರಸ್ತೆಯ ಹತ್ತರಗಿ ಬಳಿ ರೈತರ ಗುಂಪೊಂದು ಹೆದ್ದಾರಿಯನ್ನು ತಡೆಹಿಡಿಯಲು ಪ್ರಯತ್ನಿಸಿತು. ರೈತರು ಮೊದಲು ಟ್ರ್ಯಾಕ್ಟರ್‌ಗಳನ್ನು ಬಳಸಿ ಸರ್ವಿಸ್ ರಸ್ತೆಯನ್ನು ತಡೆದರು. ಆದರೆ ಜಾವೇದ್ ಮುಷಾಪುರಿ ನೇತೃತ್ವದ ಪೊಲೀಸ್ ಅಧಿಕಾರಿಗಳ ತಂಡ ವಾಹನಗಳ ಸಂಚಾರಕ್ಕೆ ಅವಕಾಶ ನೀಡುವಂತೆ ಅವರನ್ನು ಮನವೊಲಿಸಿತು.





# ಸಿದ್ದರಾಮಯ್ಯ ಕೆಳಗಿಳಿಸುವುದು ಅಷ್ಟು ಸುಲಭವಲ್ಲ, ಅವರ ಸಾಮರ್ಥ್ಯ ನಮಗಷ್ಟೇ ಗೊತ್ತು: ಎಚ್.ಡಿ. ಕುಮಾರಸ್ವಾಮಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕದಲ್ಲಿ ಮುಖ್ಯಮಂತ್ರಿ ಬದಲಾವಣೆ ಸಾಧ್ಯವಿಲ್ಲ. ಏಕೆಂದರೆ, ಸಿದ್ದರಾಮಯ್ಯ ಅವರನ್ನು ಬದಲಿಸುವುದು ಕಾಂಗ್ರೆಸ್ ಪಕ್ಷಕ್ಕೆ ಅಷ್ಟು ಸುಲಭವಲ್ಲ ಎಂದು ಜೆ.ಡಿ.ಎಸ್ ನಾಯಕ ಎಚ್.ಡಿ ಕುಮಾರಸ್ವಾಮಿ ಶುಕ್ರವಾರ ಹೇಳಿದ್ದಾರೆ.





ಸಿದ್ದರಾಮಯ್ಯ ಈ ಹಿಂದೆ ಜೆಡಿಎಸ್‌ನಲ್ಲಿದ್ದ ಕಾರಣ, ನಾನು ಮತ್ತು ನಮ್ಮ ಪಕ್ಷದ ನಾಯಕರು ಅವರ ಸಾಮರ್ಥ್ಯ ಏನೆಂದು ತಿಳಿದಿದ್ದೇವೆ. ಆದರೆ, ಅದು ಇತರರಿಗೆ ತಿಳಿದಿಲ್ಲ ಎಂದು ಕುಮಾರಸ್ವಾಮಿ ಹೇಳಿದ್ದಾರೆ.

ಈ ತಿಂಗಳ 20ರ ನಂತರ, ಕೆಲವರು 'ನವೆಂಬರ್ ಕ್ರಾಂತಿ'ಯಾಗುತ್ತದೆ ಎಂದು ಹೇಳುತ್ತಿದ್ದಾರೆ. ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆಯ ಬಗ್ಗೆ ಊಹಾಪೋಹಗಳು ಕೇಳಿಬರುತ್ತಿವೆ. ಆದರೆ 'ನನಗೆ ಕ್ರಾಂತಿಯಲ್ಲಿ ನಂಬಿಕೆ ಇಲ್ಲ, ಕ್ರಾಂತಿಯ ಬಗ್ಗೆ ಚರ್ಚೆಗಳು ನಡೆಯುತ್ತಿವೆ. ಆದರೆ, ನನ್ನ ಅಭಿಪ್ರಾಯದಲ್ಲಿ ಯಾವುದೇ ಕ್ರಾಂತಿ ಇರುವುದಿಲ್ಲ" ಎಂದು ಕುಮಾರಸ್ವಾಮಿ ಸುದ್ದಿಗಾರರಿಗೆ ಪ್ರಶ್ನೆಯೊಂದಕ್ಕೆ ಉತ್ತರಿಸಿದ್ದಾರೆ.

'ರಾಜ್ಯದಲ್ಲಿ ಏನೂ ಆಗುವುದಿಲ್ಲ. ಸಿದ್ದರಾಮಯ್ಯ ಮೊದಲು ನಮ್ಮೊಂದಿಗಿದ್ದರು, ಇತರರಿಗೆ ಅವರು ಏನೆಂದು ತಿಳಿದಿಲ್ಲ. ಅವರ ಸಾಮರ್ಥ್ಯ ಏನು ಮತ್ತು ಅವರು ಏನು ಮಾಡಲು ಸಮರ್ಥರಾಗಿದ್ದಾರೆಂದು ನಮಗೆ ತಿಳಿದಿದೆ. ಅವರನ್ನು ತೆಗೆದುಹಾಕುವುದು ಕಾಂಗ್ರೆಸ್‌ಗೆ ಅಷ್ಟು ಸುಲಭವಲ್ಲ. ಕಾಂಗ್ರೆಸ್‌ನೊಳಗೆ ಏನೇನು ಚರ್ಚೆಗಳು ನಡೆದಿವೆಯೋ, ಅದಕ್ಕೂ ನಮಗೂ ಯಾವುದೇ ಸಂಬಂಧವಿಲ್ಲ' ಎಂದು ಅವರು ಹೇಳಿದ್ದಾರೆ.

ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸಿಎಂ ಆಗುತ್ತಾರಾ ಎಂದು ಪ್ರಶ್ನಿಸಿದ್ದಕ್ಕೆ ಉತ್ತರಿಸಿದ ಕುಮಾರಸ್ವಾಮಿ, ಅವರು (ಶಿವಕುಮಾರ್) ನನ್ನನ್ನು ಯಾವಾಗ ಮುಖ್ಯಮಂತ್ರಿಯನ್ನಾಗಿ ಮಾಡಲಾಗುತ್ತದೆ ಎಂಬುದರ ಕುರಿತು ಪ್ರತಿದಿನ ದೇವರೊಂದಿಗೆ ಚರ್ಚಿಸುತ್ತಾರೆ. ಇದು ಅವರ ಮತ್ತು ದೇವರ ನಡುವಿನ ವಿಷಯ ಎಂದು ಹೇಳಿದ್ದಾರೆ.

2028ರಲ್ಲಿ ಮಾತ್ರ ರಾಜ್ಯದಲ್ಲಿ ಕ್ರಾಂತಿಯಾಗುತ್ತದೆ ಎಂಬ ಶಿವಕುಮಾರ್ ಅವರ ಹೇಳಿಕೆಯ ಕುರಿತಾದ ಪ್ರಶ್ನೆಗೆ ಉತ್ತರಿಸಿದ ಕುಮಾರಸ್ವಾಮಿ, ಈ ಹಿಂದೆ ಈ ರಾಜ್ಯದ ಹಲವರು ತಾವು ಮುಖ್ಯಮಂತ್ರಿಯಾಗುತ್ತೇವೆ ಅಥವಾ ಮುಂದಿನ ಹತ್ತು ಅಥವಾ ಇಪ್ಪತ್ತು ವರ್ಷಗಳ ಕಾಲ ರಾಜ್ಯದಲ್ಲಿ ಅಧಿಕಾರದಲ್ಲಿರುತ್ತಾರೆ ಎಂದು ಹೇಳಿದ್ದಾರೆ. ಅವರಿಗೆ ಏನಾಯಿತು ಎಂದು ನೀವು ನೋಡಿದ್ದೀರಿ. 2028 ರಲ್ಲಿ ಏನಾಗುತ್ತದೆ ಎಂದು ನೋಡೋಣ ಎಂದು ತಿಳಿಸಿದರು.

ರಾಜ್ಯದಲ್ಲಿ ರಾಜಕೀಯ ಕ್ರಾಂತಿಯಾದರೆ ಜೆಡಿಎಸ್ ಪಾತ್ರ ಏನಾಗಿರುತ್ತದೆ ಎಂಬ ಪ್ರಶ್ನೆಗೆ, 'ಅವರು (ಕಾಂಗ್ರೆಸ್) ಏನು ಮಾಡುತ್ತಾರೆ ಎಂಬುದರ ಬಗ್ಗೆ ನಮಗೆ ಕಾಳಜಿ ಇಲ್ಲ. ನಾವು ನಮ್ಮ ಪಕ್ಷವನ್ನು ಸಂಘಟಿಸಲು ಮತ್ತು ರಾಜ್ಯದ ಜನರಿಗೆ ಸಂಬಂಧಿಸಿದ ಸಮಸ್ಯೆಗಳಿಗಾಗಿ ಹೋರಾಡಲು ಬಯಸುತ್ತೇವೆ' ಎಂದು ಹೇಳಿದ್ದಾರೆ.

# ನವೆಂಬರ್ ತಿಂಗಳು 'ಮಕ್ಕಳ ಮಾಸ'

**■ವಿಜಯಸಾಕ್ಷಿ ಸುದ್ದಿ, ಗದಗ**

ಪ್ರತಿ ವರ್ಷದಂತೆ 2025–26ನೇ ವರ್ಷದ ನವೆಂಬರ್ ತಿಂಗಳನ್ನು ಅಂತಾರಾಷ್ಟ್ರೀಯ ದತ್ತು ಮಾಸಾಚರಣೆಯನ್ನಾಗಿ ಆಚರಿಸಲಾಗುತ್ತದೆ. ಪ್ರತಿ ಮಗು ಕೌಟುಂಬಿಕ ವ್ಯವಸ್ಥೆಯಲ್ಲಿ ಬೆಳೆಯುವುದು ಮಗುವಿನ ಹಕ್ಕು. ಮಗುವಿಗೆ ಅವಶ್ಯವಿರುವ ಪ್ರೀತಿ ಮತ್ತು ಆರೈಕೆಯನ್ನು ಕುಟುಂಬದ ವಾತಾವರಣವನ್ನು ಕಲ್ಪಿಸುತ್ತದೆ. ಈ ನಿಟ್ಟಿನಲ್ಲಿ ದತ್ತು ಪ್ರಕ್ರಿಯೆಯು ಅನಾಥ, ಪರಿತ್ಯಕ್ತ ಹಾಗೂ ಒಪ್ಪಿಸಲ್ಪಟ್ಟ ಮಕ್ಕಳ ಪುನರ್ವಸತಿಗೆ ನೆರವಾಗುವುದು ಮಕ್ಕಳ ನಿರ್ದೇಶನಾಲಯದ ಯೋಜನೆಯ ಉದ್ದೇಶವಾಗಿದೆ.

Adoption of children having special Need ಎಂಬ ಘೋಷ ವಾಕ್ಯದೊಂದಿಗೆ ಈ ವರ್ಷ ನವೆಂಬರ್ ತಿಂಗಳನ್ನು ಅಂತಾರಾಷ್ಟ್ರೀಯ ದತ್ತು ಮಾಸಾಚರಣೆ ಎಂದು ಆಚರಿಸಲಾಗುತ್ತಿದೆ. ಇದರ ಅಂಗವಾಗಿ ಪೋಷಕತ್ವ ಯೋಜನೆ, ಕಾನೂನು ಬದ್ಧ ದತ್ತು ಹಾಗೂ ಕಾನೂನು ಬಾಹಿರ ದತ್ತು ಪ್ರಕ್ರಿಯೆ ಅಪರಾಧ, ಮಕ್ಕಳ ಮಾರಾಟ ಅಪರಾಧ, ಮಕ್ಕಳನ್ನು ಮಾರುವವರಿಗೂ ಹಾಗೂ ಕೊಳ್ಳುವವರಿಗೂ ಬಾಲನ್ಯಾಯ ಕಾಯ್ದೆ 2015 ಸೆಕ್ಷನ್ 80, 81ರನ್ವಯ 5 ವರ್ಷಗಳವರೆಗೂ ಸೆರೆಮನೆ ವಾಸದೊಂದಿಗೆ 1 ಲಕ್ಷ ರೂಗಳ ದಂಡ ವಿಧಿಸಬಹುದು.

ಈ ಹಿನ್ನೆಲೆಯಲ್ಲಿ ಮಕ್ಕಳ ಗ್ರಾಮ ಸಭೆಗಳು, ಮಕ್ಕಳ ಸ್ನೇಹಿ ಗ್ರಾಮ ಪಂಚಾಯಿತಿ ಅಭಿಯಾನ, ಬಾಲ ಕಾರ್ಮಿಕರು ಹಾಗೂ ಶಾಲೆ ಬಿಟ್ಟ ಮಕ್ಕಳ ಗುರುತಿಸುವಿಕೆ ಮತ್ತು ರಕ್ಷಣೆ, ಮಕ್ಕಳ ಬಲವರ್ಧನೆ, ಶೈಕ್ಷಣಿಕ ಸಂಸ್ಥೆಗಳಲ್ಲಿ ಮಕ್ಕಳ ರಕ್ಷಣಾ ನೀತಿ 2016 ಮತ್ತು ತೆರೆದ ಮನೆ ಕಾರ್ಯಕ್ರಮದ ಅನುಷ್ಠಾನ, ಅನಾಥ ಹಾಗೂ ಸಂಕಷ್ಟದಲ್ಲಿರುವ ಮಕ್ಕಳ ಗುರುತಿಸುವಿಕೆ, ಮಕ್ಕಳ ಸಹಾಯವಾಣಿ ಹಾಗೂ ದತ್ತು ಕಾರ್ಯಕ್ರಮದ ಪ್ರಚಾರ ಸೇರಿದಂತೆ ವಿವಿಧ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಲ್ಲಿ ಇಡೀ ತಿಂಗಳು ಗ್ರಾಮ ಮಟ್ಟದಿಂದ ಜಿಲ್ಲಾ ಮಟ್ಟದವರೆಗೆ ಕ್ರಿಯಾ ಯೋಜನೆ ರೂಪಿಸಿ ಅನುಷ್ಠಾನ ಮಾಡಬೇಕೆಂದು ನಿರ್ದೇಶನ ನೀಡಲಾಗಿದೆ. ನವೆಂಬರ್ ತಿಂಗಳನ್ನು ಮಕ್ಕಳ ಮಾಸ ಎಂದು ಘೋಷಿಸಿ ಆಚರಿಸಬೇಕೆಂದು ಮಕ್ಕಳ ರಕ್ಷಣಾ ನಿರ್ದೇಶನಾಲಯದ ನಿರ್ದೇಶಕರು ಸೂಚಿಸಿರುವುದಾಗಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶ್ರೀ ಧ.ಗ್ರಾ ಯೋಜನೆಯ ವತಿಯಿಂದ ತಾಲೂಕು ಮಟ್ಟದ ಮಹಿಳಾ ವಿಚಾರಗೋಷ್ಠಿ

# ಹೆಣ್ಣು ಕುಟುಂಬ, ಸಮಾಜದ ಕಣ್ಣು

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಗ್ರಾಮೀಣ ಭಾಗಗಳ ಸಬಲೀಕರಣವಾದರೆ ದೇಶದ ಅಭಿವೃದ್ಧಿ ಸಾಧ್ಯವಿದೆ. ಅದಕ್ಕಾಗಿ ಮಹಿಳೆಯರು ಸ್ವಾವಲಂಬಿ ಜೀವನ ಸಾಗಿಸುವಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯು ಪೂರಕ ಸಹಾಯ–ಸಹಕಾರ ಮಾಡುತ್ತಿದೆ ಎಂದು ಕೊಪ್ಪಳ ವಿಭಾಗದ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಕಲ್ಯಾಣ ಕರ್ನಾಟಕ ಪ್ರಾದೇಶಿಕ ನಿರ್ದೇಶಕ ಜೆ.ಚಂದ್ರಶೇಖರ ಅವರು ಹೇಳಿದರು.

ಪಟ್ಟಣದ ಶಂಖ ಬಸದಿಯಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ತಾಲೂಕು ಮಟ್ಟದ ಮಹಿಳಾ ವಿಚಾರಗೋಷ್ಠಿ ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯರು ಸಮಾಜದ ಮುಖ್ಯವಾಹಿನಿಗೆ ಬರಲು ಜ್ಞಾನ ವಿಕಾಸದ ಕಾರ್ಯಕ್ರಮಗಳ ಮೂಲಕ ಅವರಲ್ಲಿ ಜಾಗೃತಿ ಮೂಡಿಸುವ



ಕಾರ್ಯವನ್ನು ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ಮಾಡುತ್ತಿದೆ. ಮಹಿಳೆಯರಲ್ಲಿ ಅಡಗಿರುವ ಸುಪ್ತ ಪ್ರತಿಭೆ, ಕೌಶಲ್ಯವನ್ನು ಗುರುತಿಸಿ ಬೆಳಕಿಗೆ ತರುವ, ಪ್ರೋತ್ಸಾಹಿಸುವ ಕಾರ್ಯ ಮಾಡುತ್ತಿದೆ. ಹೆಣ್ಣು ಕುಟುಂಬ–ಸಮಾಜದ ಕಣ್ಣಾಗಿದ್ದು, ಮಹಿಳೆಗೆ ಶಿಕ್ಷಣ ಹಾಗೂ ಜ್ಞಾನವನ್ನು ನೀಡಿದಲ್ಲಿ ಆ ಕುಟುಂಬ ಆರ್ಥಿಕ, ಸಾಮಾಜಿಕ ಮತ್ತು ಶೈಕ್ಷಣಿಕವಾಗಿ ಬಲಗೊಳ್ಳಲು ಸಾಧ್ಯ. ಮಹಿಳೆಯರು ತಮ್ಮ ಆರೋಗ್ಯಕ್ಕೆ ಹೆಚ್ಚಿನ ಒತ್ತು ನೀಡಬೇಕು ಎಂದು ಹೇಳಿದರು.

ಧಾರವಾಡದ ಎಸ್‌ಡಿಎಂಸಿ ವೀರನಾರಾಯಣ ಹಾರ್ಟ್ ಸೆಂಟರ್‌ನ ವೈದ್ಯ ಡಾ. ಬಸವರಾಜ ಮಾತನಾಡಿ, ಪ್ರತಿ ದಿನ ಹೃದಯಾಘಾತದಿಂದ 1 ಲಕ್ಷಕ್ಕೆ 63 ಜನ ಮರಣ ಹೊಂದುತ್ತಿದ್ದಾರೆ. ಇದರಲ್ಲಿ 40–50 ವಯಸ್ಸಿನ ಯುವಕರು ಹೆಚ್ಚಾಗಿ ಹೃದಯಾಘಾತದಿಂದ ನಿಧನ ಹೊಂದುತ್ತಿರುವುದು ನೋವಿನ ಸಂಗತಿಯಾಗಿದೆ. ಗ್ರಾಮೀಣ ಭಾಗದ ಯುವಕರಿಗಿಂತ ನಗರ ಭಾಗದ ಯುವಕರು ಹೆಚ್ಚಿನ ಪ್ರಮಾಣದಲ್ಲಿ ಹೃದಯಾಘಾತಕ್ಕೆ ತುತ್ತಾಗುತ್ತಿದ್ದಾರೆ ಎಂದು ಹೇಳಿದರು.

ಹೃದಯಾಘಾತಕ್ಕೆ ವಂಶಾವಳಿ, ದಢೂತಿ ದೇಹ, ಸಿಗರೇಟ್ ಸೇವನೆ, ಒತ್ತಡದ ಜೀವನ ಹಾಗೂ ವಿಶ್ರಾಂತಿ ರಹಿತ ಜೀವನ, ಕೌಟುಂಬಿಕ ಒತ್ತಡ, ಸಕ್ಕರೆ ಕಾಯಿಲೆ, ರಕ್ತದೊತ್ತಡ ಸೇರಿದಂತೆ ಇನ್ನೂ ಹಲವು ಕಾರಣಗಳಿಂದ ಹೃದಯಾಘಾತ ಸಂಭವಿಸುವ ಸಾಧ್ಯತೆ ಹೆಚ್ಚು. ಹೃದಯಾಘಾತಕ್ಕೆ ಒಳಗಾದ ವ್ಯಕ್ತಿಯು ಕುಸಿದು ಬಿದ್ದ ತಕ್ಷಣವೇ ಅವರಿಗೆ ಪ್ರಥಮ ಚಿಕಿತ್ಸೆ ನೀಡಿದಲ್ಲಿ ಹೆಚ್ಚಿನ ಸಂದರ್ಭದಲ್ಲಿ ಸಾವು ತಪ್ಪಿಸಲು ಸಾಧ್ಯ ಎಂದು ಡಾ. ಬಸವರಾಜ ತಿಳಿಸಿದರು.

ಈ ವೇಳೆ ತಹಸೀಲ್ದಾರ ರಾಘವೇಂದ್ರ ಕೆ, ಪುರಸಭೆ ಸದಸ್ಯ ರಾಜು ಕುಂಬಿ, ಅಶ್ವಿನಿ ಅಂಕಲಕೋಟಿ ಮಾತನಾಡಿದರು. ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ, ಫಕ್ಕೀರೇಶ ಮ್ಯಾಟಣ್ಣವರ, ಪಿಎಸ್‌ಐ ನಾಗರಾಜ ಗಡಾದ ಇದ್ದರು. ಸಭೆಯ ಅಧ್ಯಕ್ಷತೆಯನ್ನು ಸುರೇಂದ್ರಗೌಡ ಪಾಟೀಲ ವಹಿಸಿದ್ದರು.

ಸಭೆಯಲ್ಲಿ ನಂದಕುಮಾರ್ ಪಾಟೀಲ ಸೇರಿದಂತೆ ನೂರಾರು ಸಂಖ್ಯೆಯ ಮಹಿಳೆಯರು ಮಹಿಳೆಯರು ಭಾಗವಹಿಸಿದ್ದರು. ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ಗದಗ ಜಿಲ್ಲಾ ನಿರ್ದೇಶಕ ಕೇಶವ ದೇವಾಂಗ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಾಂತಾ ಸ್ವಾಗತಿಸಿದರು. ಕ್ಷೇತ್ರ ಯೋಜನಾಧಿಕಾರಿ ಪುನೀತ ಓಲೇಕಾರ, ಸಿಬ್ಬಂದಿಗಳು ನಿರ್ವಹಿಸಿದರು.

# ಮೆಕ್ಕೆಜೋಳಕ್ಕೆ ಸೂಕ್ತ ಬೆಲೆ ನಿಗದಿಪಡಿಸಿ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಬಯಲು ಸೀಮೆಯ ಒಣ ಬೇಸಾಯದ ಪ್ರಮುಖ ಬೆಳೆಗಳಲ್ಲಿ ಒಂದಾಗಿರುವ ಮೆಕ್ಕೆಜೋಳಕ್ಕೆ ಸೂಕ್ತ ಬೆಲೆ ನಿಗದಿಪಡಿಸಿ ಅನ್ನದಾತರ ಸಂಕಷ್ಟಕ್ಕೆ ಸ್ಪಂದಿಸಬೇಕು ಎಂದು ರೈತ ಮುಖಂಡ ಗಿರೀಶ ವಿರೂಪಾಕ್ಷಪ್ಪ ಹೆಗ್ಗಡದಿನ್ನಿ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಸರ್ಕಾರ ಕೇವಲ ಕಬ್ಬು ಬೆಳೆಯುವ ರೈತರ ಬಗ್ಗೆ ಮಾತ್ರ ಮಾತನಾಡುತ್ತಿದೆ. ಆದರೆ ಇತರೆ ಬೆಳೆಗಾರರನ್ನು ನಿರ್ಲಕ್ಷಿಸುತ್ತಿದೆ. ಗದಗ ಜಿಲ್ಲೆ ಸೇರಿದಂತೆ ಉತ್ತರಕರ್ನಾಟಕದ



ಬಹುತೇಕ ಭಾಗದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಮೆಕ್ಕೆಜೋಳ ಬೆಳೆಯಲಾಗಿದೆ. ಮುಂಗಾರಿನ ಅತಿವೃಷ್ಟಿಯಲ್ಲಿ ಸಿಲುಕಿ ಪರದಾಡಿರುವ ರೈತರಿಗೆ ಸೂಕ್ತ ದರ ಸಿಕ್ಕಿಲ್ಲ. ಪ್ರತಿ ವರ್ಷ ಮಾರುಕಟ್ಟೆಯಲ್ಲಿ ಮೆಕ್ಕೆಜೋಳಕ್ಕೆ ಕ್ವಿಂಟಾಲ್‌ಗೆ ರೂ. 2200ಕ್ಕೂ ಹೆಚ್ಚು ಬೆಲೆ ನೀಡುತ್ತಿದ್ದರು. ಆದರೆ ಈ ಬಾರಿ ರೈತರು ಸೂಕ್ತ ದರ ಸಿಗದ ಕಾರಣ ಮಾರುಕಟ್ಟೆಯಲ್ಲಿ ಪ್ರತಿ ಕ್ವಿಂಟಾಲ್‌ಗೆ ಕೇವಲ ರೂ. 1700ಗೆ ಕೊಡುವ ಮೂಲಕ ಕೈಸುಟ್ಟುಕೊಂಡಿದ್ದಾರೆ.

ಆದ್ದರಿಂದ ಮೆಕ್ಕೆಜೋಳಕ್ಕೆ ಪ್ರತಿ ಕ್ವಿಂಟಾಲ್‌ಗೆ ರೂ. 2400ಕ್ಕಿಂತ ಹೆಚ್ಚಿನ ದರ ನಿಗದಿಪಡಿಸಬೇಕು ಮತ್ತು ಆದಷ್ಟು ಬೇಗ ಖರೀದಿ ಕೇಂದ್ರ ಆರಂಭಿಸಬೇಕು ಎಂದು ಆಗ್ರಹಿಸಿದ್ದಾರೆ.

# ಪ್ರಬಂಧ ಸ್ಪರ್ಧೆಯಲ್ಲಿ ತೃತೀಯ ಸ್ಥಾನ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಇತ್ತೀಚೆಗೆ ಗದಗ ಜಿಲ್ಲಾಡಳಿತ ಭವನದಲ್ಲಿ ಜರುಗಿದ ಜಿಲ್ಲಾ ಮಟ್ಟದ ಪರಿಸರ ಸಂರಕ್ಷಣೆ ಪ್ರಬಂಧ ಸ್ಪರ್ಧೆಯಲ್ಲಿ ಸಮೀಪದ ಕೋಟುಮಚಗಿ ಗ್ರಾಮದ ಶ್ರೀ ಸೋಮೇಶ್ವರ ಪ್ರೌಢಶಾಲೆಯ ವಿದ್ಯಾರ್ಥಿನಿ ನಿವೇದಿತಾ ಗದಗಿನಮಠ ತೃತೀಯ ಸ್ಥಾನ ಪಡೆದು ಶಾಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾಳೆ ಎಂದು ಮುಖ್ಯ ಶಿಕ್ಷಕಿ ಟಿ.ಜಿ. ಕಂಬಾಳಿಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಂದಿನ ಪ್ರಧಾನಿ ಇಂದಿರಾ ಗಾಂಧಿಯವರು ಚಾಲನೆ ನೀಡಿದ್ದ ಕರ್ನಾಟಕ ಮಾಲಿನ್ಯ ಮಂಡಳಿಗೆ 50 ವರ್ಷಗಳು ಪೂರೈಸಿರುವ ಹಿನ್ನೆಲೆಯಲ್ಲಿ ಗದಗ ಜಿಲ್ಲಾಡಳಿತ ಭವನದಲ್ಲಿ ಗದಗ, ಧಾರವಾಡ ಮತ್ತು ಕಾರವಾರ ಜಿಲ್ಲೆಗಳ ವಿದ್ಯಾರ್ಥಿಗಳಿಗಾಗಿ ಪರಿಸರ ಮಾಲಿನ್ಯ ಮತ್ತು ಸಂರಕ್ಷಣೆ ಕುರಿತ





ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗಾಗಿ ಚಿತ್ರಕಲೆ, ಭಾಷಣ, ಪ್ರಬಂಧ ಮತ್ತು ರೀಲ್ಸ್ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು. ಈ ಸ್ಪರ್ಧೆಯಲ್ಲಿ ಪ್ರಬಂಧ ವಿಭಾಗದಲ್ಲಿ ನಿವೇದಿತಾ ಗದಗಿನಮಠ ತೃತೀಯ ಸ್ಥಾನ ಪಡೆದಿದ್ದಾಳೆ.

ಕಾರ್ಯಕ್ರಮದಲ್ಲಿ ರಾಜ್ಯ ಮಾಲಿನ್ಯ ಮಂಡಳಿ ಅಧ್ಯಕ್ಷ ನರೇಂದ್ರಸ್ವಾಮಿ, ಶಾಸಕರಾದ ಮಹೇಶ ಟೆಂಗಿನಕಾಯಿ, ಪ್ರಸಾದ ಅಬ್ಬಯ್ಯ, ಐ.ಜಿ. ಸನದಿ, ಧಾರವಾಡ ಡಿಸಿ ದಿವ್ಯಪ್ರಭು, ಧಾರವಾಡ ಮಹಾನಗರ ಪಾಲಿಕೆ ಅಧ್ಯಕ್ಷೆ ಪಾಟೀಲ ಮತ್ತಿತರ ಗಣ್ಯರು ಪಾಲ್ಗೊಂಡಿದ್ದರು.

ಸಾಧಕ ವಿದ್ಯಾರ್ಥಿನಿಗೆ ಸೋಮೇಶ್ವರ ಶಿಕ್ಷಣ ಸಮಿತಿಯ ಅಧ್ಯಕ್ಷ ಆರ್.ವಿ. ಕುಲಕರ್ಣಿ, ಗೌರವ ಕಾರ್ಯದರ್ಶಿ ಎಂ.ಬಿ. ರಮಾಣಿ, ಸದಸ್ಯರು ಮತ್ತು ಸಿಬ್ಬಂದಿ ಹೃತ್ಪೂರ್ವಕ ಅಭಿನಂದನೆ ಸಲ್ಲಿಸಿದ್ದಾರೆ.

# ಬಸ್ ನಿಲ್ದಾಣವನ್ನು ವ್ಯವಸ್ಥಿತವಾಗಿ ನಿರ್ವಹಿಸಿ

▶▶ಮೊದಲನೇ ಪುಟದಿಂದ



ಮಹಿಳೆಯರು ಶಕ್ತಿ ಯೋಜನೆಯಡಿ ಪ್ರಯಾಣಿಸುತ್ತಿದ್ದಾರೆ. ಚಾಲಕರ ಹುದ್ದೆ ಅತ್ಯಂತ ಕಷ್ಟಕರವಾದದ್ದು. ಅತ್ಯುತ್ತಮ ರಸ್ತೆಗಳಿದ್ದರೆ ಗುಣಮಟ್ಟದ ಸೇವೆ ಒದಗಿಸಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ವಿಧಾನ ಪರಿಷತ್ತಿನ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ಅಧ್ಯಕ್ಷ ಸೈಯದ್ ಅಜೀಮ್‌ಪೀರ ಎಸ್. ಖಾದ್ರಿ, ಮುಖ್ಯ ಅತಿಥಿಗಳಾಗಿ ಶಾಸಕರಾದ ಪ್ರದೀಪ ಶೆಟ್ಟರ, ಎಫ್.ಎಚ್. ಜಕ್ಕಪ್ಪನವರ, ಕರ್ನಾಟಕ ಬಾಲ ವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಬಬಲೇಶ್ವರ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪಾಟೀಲ, ಮಹಾಪೌರ ಜ್ಯೋತಿ ಪಾಟೀಲ, ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಉಪಾಧ್ಯಕ್ಷ ಸುನೀಲ್ ಹಣಮನ್ನವರ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಹುಬ್ಬಳ್ಳಿ–ಧಾರವಾಡ ಪೊಲೀಸ್ ಆಯುಕ್ತ ಎನ್. ಶಶಿಕುಮಾರ್, ಹೆಚ್‌ಡಿಬಿಆರ್‌ಟಿಎಸ್ ವ್ಯವಸ್ಥಾಪಕ ನಿರ್ದೇಶಕಿ ಸಾವಿತ್ರಿ ಕಡಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಅಧಿಕಾರಿಗಳು, ಸಿಬ್ಬಂದಿ ಸಾರ್ವಜನಿಕರು ಇತರರು ಉಪಸ್ಥಿತರಿದ್ದರು. ಸುನೀಲ ಪತ್ರಿ ಮತ್ತು ಸಂಗಡಿಗರು ನಾಡಗೀತೆ ಹಾಡಿದರು. ಮುಖ್ಯ ಯಾಂತ್ರಿಕ ಅಭಿಯಂತರ ಸಿದ್ಧೇಶ್ವರ ಹೆಬ್ಬಾಳ ಸ್ವಾಗತಿಸಿದರು. ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಪ್ರಿಯಾಂಗಾ ಎಂ ಪ್ರಾಸ್ತಾವಿಕವಾಗಿ ಮಾತನಾಡಿದರು. ರವಿ ಕುಲಕರ್ಣಿ ನಿರೂಪಿಸಿದರು. ಇಲಾಖಾ ಮುಖ್ಯಸ್ಥರಾದ ವಿವೇಕಾನಂದ ವಿಶ್ವಜ್ಞ ವಂದಿಸಿದರು.



ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಧಾರವಾಡ ಅವರ ಜ್ಞಾಪನದಂತೆ ಬೆಳಗಾವಿ ವಿಭಾಗದ ಸರಕಾರಿ/ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಕಲಿಕಾ ಗುಣಮಟ್ಟವನ್ನು ಪರಿಶೀಲಿಸಲು, ಇಲಾಖೆಯ ಮಹತ್ವದ ಕಾರ್ಯಕ್ರಮಗಳಾದ ಎಫ್.ಎಲ್.ಎನ್, ಎಲ್‌ಬಿಎ, ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗೆ 29 ಅಂಶಗಳ ಕಾರ್ಯಕ್ರಮದ ಅನುಷ್ಠಾನದ ಪ್ರಗತಿಯನ್ನು ಖಾತ್ರಿಪಡಿಸಿಕೊಳ್ಳಲು ಭಾರತಿ ವಿಶ್ವ ಸೇವಾ ಸದನ ಪ್ರೌಢಶಾಲೆ, ಸೋಮಾಪುರ ಶಾಲೆಗೆ ಡಯಟ್ ಪ್ರಾಚಾರ್ಯ ಜೆ.ಜಿ. ಸೈಯದ ನೇತೃತ್ವದ ತಂಡ ಭೇಟಿ ನೀಡಿತು. ಈ ಸಂದರ್ಭದಲ್ಲಿ ಡಯಟ್ ಹಿರಿಯ ಉಪನ್ಯಾಸಕಿ ರೇಖಾ ಭಜಂತ್ರಿ, ವಿಜ್ಞಾನ ವಿಷಯ ಪರಿವೀಕ್ಷಕರಾದ ಡಾ. ಗಿರಿಜಾ ಲಮಾಣಿ ತಂಡದ ಸದಸ್ಯರಾಗಿ ಕಾರ್ಯನಿರ್ವಹಿಸಿದರು.

# ಪ್ರಿಯಕರನ ಕಿರುಕುಳಕ್ಕೆ ಬೇಸತ್ತು ಪ್ರೇಯಸಿ ಸೂಸೈಡ್!

▶▶ಮೊದಲನೇ ಪುಟದಿಂದ

ನಿನಗೆ 21 ವರ್ಷ. ಆ ಹುಡುಗನಿಗೆ ಇನ್ನೂ 19 ವರ್ಷ. ಹೀಗಾಗಿ ಎರಡು ವರ್ಷ ಬಳಿಕ ಆನಂತರ ಮದುವೆ ಮಾಡುವುದಾಗಿ ತಾಯಿ ಹೇಳಿದ್ದಳು. ಆದರೂ ಪ್ರಿಯಾಂಕಳನ್ನ ಬೆನ್ನು ಬಿದ್ದಿದ್ದ ಸುಮಂತ್ ಕೊಡಬಾರದ ಕಾಟ ಕೊಟ್ಟಿದ್ದಾನೆ.

ಪ್ರಿಯಾಂಕಾಳ ಫೋನ್ ಬ್ಯುಸಿ ಬಂದಾಗೆಲ್ಲ ಸುಮಂತ್‌ಗೆ ಅನುಮಾನ. ಸಾಲದಕ್ಕೆ ಸಿಕ್ಕ ಸಿಕ್ಕವರ ಜೊತೆ ಸಂಬಂಧ ಕಟ್ಟಿ ಬಾಯಿಗೆ ಬಂದಂಗೆ ಬೈಯುತ್ತಿದ್ದ. ಅಲ್ಲದೇ ಅಕ್ಟೋಬರ್ 30ರ ಗುರುವಾರ ಬೆಳಿಗ್ಗೆ ಕೂಡ ಕರೆ ಮಾಡಿ ಗಲಾಟೆ ಮಾಡಿದ್ದು, ಆತ್ಮಹತ್ಯೆ ಮಾಡಿಕೋ ಎಂದು ಪ್ರಚೋದನೆ ನೀಡಿದ್ದಾನೆ. ಇದರಿಂದ ಪೂರ್ತಿ ಮನನೊಂದಿದ್ದ ಪ್ರಿಯಾಂಕ ಮನೆಯಲ್ಲೇ ನೇಣಿಗೆ ಶರಣಾಗಿದ್ದಾಳೆ.

ಹೀಗಾಗಿ ಆರೋಪಿ ವಿರುದ್ಧ ಸೂಕ್ತ ಕ್ರಮಕ್ಕೆ ಯುವತಿ ಪೋಷಕರು ಆಗ್ರಹ ಮಾಡಿದ್ದಾರೆ.

# ಪಾದಯಾತ್ರೆಯಿಂದ ಸಕಲ ಸಮೃದ್ಧಿ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪರಮಾತ್ಮನ ಒಲುಮೆ ಪಡೆದುಕೊಳ್ಳಲು ಹಲವಾರು ಮಾರ್ಗಗಳಿದ್ದು, ಅವುಗಳಲ್ಲಿ ತೀರ್ಥ ಕ್ಷೇತ್ರಗಳಿಗೆ ಕೈಗೊಳ್ಳುವ ಪಾದಯಾತ್ರೆ ಉತ್ತಮವಾದದ್ದು ಎಂದು ಬಾಲಲೀಲಾ ಮಹಾಂತ ಶಿವಯೋಗಿ ಶಿಕ್ಷಣ ಸಮಿತಿ ಅಧ್ಯಕ್ಷ ಎಂ.ಡಿ. ಬಟ್ಟೂರ ಹೇಳಿದರು.



ಅವರು ಪಟ್ಟಣದ ಬಾಲಲೀಲಾ ಮಹಾಂತ ಶಿವಯೋಗಿ ಗವಿಮಠದಲ್ಲಿ ಸತತ 50 ವರ್ಷದಿಂದ ಯಡೆಯೂರ ಶಿದ್ದಲಿಂಗೇಶ್ವರ ದೇವಸ್ಥಾನಕ್ಕೆ ತೆರಳುತ್ತಿರುವ ಸದ್ಭಾವನಾ ಪಾದಯಾತ್ರಾರ್ಥಿಗಳಿಗೆ ದಾಸೋಹ ನೆರವೇರಿಸಿ, ಸನ್ಮಾನಿಸಿ ಮಾತನಾಡಿದರು. ಪಾದಯಾತ್ರೆಯಿಂದ ಮನಸ್ಸು ಶುದ್ಧಿಯಾಗುತ್ತದೆ. ಆರೋಗ್ಯದಲ್ಲಿ ಸುಧಾರಣೆಯಾಗುತ್ತದೆ, ದೈಹಿಕ ಹಾಗೂ ಮಾನಸಿಕ ಶಕ್ತಿ ವೃದ್ಧಿಯಾಗುತ್ತದೆ. ಇಂತಹ ಪಾದಯಾತ್ರಿಗಳನ್ನು ಪ್ರತಿ ವರ್ಷ ಶಿವಬಸವ ಹಸಬಿ ಕುಟುಂಬ ಸತ್ಕರಿಸುತ್ತಿರುವುದು ಶ್ಲಾಘನೀಯ ಎಂದರು. ಚಂದ್ರಶೇಖರ ಮುಳಗುಂದ ಮಾತನಾಡಿ, ದೇವರ ಬಗ್ಗೆ ಇರುವ ಭಯ–ಭಕ್ತಿ ನೀತಿ ಮಾರ್ಗದಲ್ಲಿ ಮುನ್ನಡೆಯಲು ಸ್ಫೂರ್ತಿ ನೀಡುತ್ತದೆ. ನಾವು ನಿಂತ ನೆಲ, ಕುಡಿಯುವ ನೀರು, ತಿನ್ನುವ ಅನ್ನ, ಉಸಿರಾಡುವ ಗಾಳಿ ದೇವರ ಕೊಡುಗೆಯಾಗಿದೆ. ಇವುಗಳನ್ನು ಕರುಣಿಸಿದ ಭಗವಂತನನ್ನು ನಾವು ಮರೆಯಬಾರದು. ವರ್ಷದಲ್ಲಿ ಒಂದು ತಿಂಗಳಾದರೂ ಅವನ ಸ್ಮರಣೆಯಲ್ಲಿ ಪಾದಯಾತ್ರೆ ಮಾಡುವುದರಿಂದ ಎಲ್ಲವೂ ಪ್ರಾಪ್ತಿಯಾಗುತ್ತದೆ ಎಂದರು.

170 ಪಾದಯಾತ್ರಿಗಳು, ಬಾಣಸಿಗರು ಹಾಗೂ 50 ವರ್ಷ ಕಾಲ ಪಾದಯಾತ್ರೆ ಮಾಡಿದವರನ್ನು ಸನ್ಮಾನಿಸಲಾಯಿತು. ಡಾ. ಎಸ್.ಸಿ. ಚವಡಿ, ಪಿ.ಎ. ವಂಟಕರ, ಅಶೋಕ ಸೋನಗೋಜಿ, ರಾಮಣ್ಣಾ ಕಮಾಜಿ, ಎಸ್.ಸಿ. ಬಡ್ನಿ, ಫಕ್ಕೀರಯ್ಯ ಅಮೋಘಿಮಠ, ಶಿವಬಸವ ಹಸಬಿ, ಬಸವರಾಜ ಬಾತಾಖಾನಿ, ಅಶೋಕ ಮೆಣಸಿನಕಾಯಿ, ಮಹೇಶ ಕೋರಿ ಇದ್ದರು.

# ಹೆಮ್ಮೆಯ ಯೋಧನಿಗೆ ಅದ್ದೂರಿ ಸ್ವಾಗತ

**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ಸೇನೆಯಲ್ಲಿ 30 ವರ್ಷಗಳ ಕಾಲ ತಮ್ಮ ಅಮೋಘ ಸೇವೆ ಸಲ್ಲಿಸಿ ತಾಯ್ನಾಡಿಗೆ ಆಗಮಿಸಿದ ಹೊಂಬಳ ಗ್ರಾಮದ ಸುಬೇದಾರ್ ಜೀವನಸಾಬ್ ಬೂದಿಹಾಳ ಅವರನ್ನು ಹೊಂಬಳ ಗ್ರಾಮದಲ್ಲಿ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘ, ಹೊಂಬಳ ಮತ್ತು ಗದಗ ಜಿಲ್ಲೆಯ ಮಾಜಿ ಸೈನಿಕರ ನೇತೃತ್ವದಲ್ಲಿ ಭವ್ಯವಾಗಿ ಸ್ವಾಗತಿಸಲಾಯಿತು.

ಸಂಘದ ಜಿಲ್ಲಾಧ್ಯಕ್ಷ ಬಸಲಿಂಗಪ್ಪ ಮುಂಡರಗಿ, ದತ್ತಣ್ಣ ಜೋಶಿ, ಗುಳಯ್ಯ ಮಾಲಗಿತ್ತಿಮಠ, ಹೊಂಬಳ ಗ್ರಾಮದ ಮಾಜಿ ಸೈನಿಕರ ಸಂಘದ ಅಧ್ಯಕ್ಷ ಗುರುಪಾದಯ್ಯ ಕೆಂಭಾವಿಮಠ, ಬೆಳಗಾವಿಯ ಆರ್ಮಿ ಕೋಚಿಂಗ್ ಸೆಂಟರ್‌ನ ತರಬೇತುದಾರ ಸುದೇಶ್ ಸನಾದಿ



ಮುಂತಾದವರು ಸೈನಿಕರ ಶಕ್ತಿಯ ಕುರಿತು ಮಾತನಾಡಿದರು.

ಈ ಸಂದರ್ಭದಲ್ಲಿ ವೆಂಕಪ್ಪ ಕಲಹಾಳ, ನಿಂಗಪ್ಪ ಚೋರಗಸ್ತಿ, ಬಸಪ್ಪ ಸೈದಾಪುರ್, ಪ್ರಕಾಶಪ್ಪ ಬಂಡಿಹಾಳ, ಚೆನ್ನಪ್ಪ ಹೊಸಮನಿ, ಸಿದ್ದು ಮುಧೋಳ, ಬೂದಪ್ಪ ಸಂಶಿ, ವೀರೇಶ್ ಬಾನಿಕಟ್ಟಿ, ಹನಮಪ್ಪ ಶಾಂತಗೇರಿ, ಶಿವಪ್ಪ ಹಡಪದ, ಚಂದ್ರಶೇಖರಪ್ಪ ಬಿಳೆಯಲಿ, ಬಸವರಾಜ್ ಹಿರೇಹಾಳ, ಅಪ್ಪಣ್ಣ ಹನಸಿ, ಮಹಾಂತೇಶ್ ಕುರಹಟ್ಟಿ ಸೇರಿದಂತೆ ಹೊಂಬಳ ಹಾಗೂ ಗದಗ ಜಿಲ್ಲೆಯ ಎಲ್ಲಾ ಹಾಲಿ ಮತ್ತು ಮಾಜಿ ಸೈನಿಕರು, ವೀರನಾರಿಯರು, ಅರೆಸೇನಾ ಪಡೆಗಳ ಯೋಧರು, ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಪದಾಧಿಕಾರಿಗಳು, ಗ್ರಾಮದ ಗುರು–ಹಿರಿಯರು, ಬೂದಿಹಾಳ ಬಳಗದವರು ಹಾಗೂ ಗ್ರಾಮ ಪಂಚಾಯಿತಿಯ ಸದಸ್ಯರು ಉಪಸ್ಥಿತರಿದ್ದರು.

### ಕಪ್ಪತ್ತಗುಡ್ಡಕ್ಕೆ ಪರಿಸರ ಪ್ರಿಯರನ್ನು ಸೆಳೆಯಲು ಅರಣ್ಯ ಇಲಾಖೆಯಿಂದ ವಿನೂತನ ಕಾರ್ಯಗಳು

# ಕಪ್ಪತ್ತಗುಡ್ಡದ ಸೊಬಗಿಗೆ ಆಧುನಿಕ ಸ್ಪರ್ಶ




■ ವಿಜಯಸಾಕ್ಷಿ ಸುದ್ದಿ, ಡಂಬಳ

ಕಪ್ಪತ್ತಗುಡ್ಡವೆಂದರೆ, ಹಸಿರು ಜಗತ್ತು ಎನ್ನುವಂತೆ ಭಾಸವಾಗುತ್ತದೆ. ಅರಣ್ಯ ಇಲಾಖೆ ಮಳೆಗಾಲದಲ್ಲಿ 10 ಸಾವಿರಕ್ಕೂ ಹೆಚ್ಚು ವಿವಿಧ ಮಾದರಿಯ ಬೀಜದುಂಡೆಗಳನ್ನು ಕಪ್ಪತ್ತಗುಡ್ಡ ವೀಕ್ಷಣೆಗೆ ಬರುವ ಪ್ರವಾಸಿಗರಿಗೆ ನೀಡಿ, ಕಪ್ಪತಗುಡ್ಡದಾದ್ಯಂತ ಪಸರಿಸುವ ಮೂಲಕ ಪರಿಸರ ವೃದ್ಧಿಸುವ ಯೋಜನೆ ಹಮ್ಮಿಕೊಂಡಿತ್ತು. ಅಲ್ಲದೆ, 1.50 ಲಕ್ಷ ಸಸಿಗಳನ್ನು ನೆಡುವುದರ ಮೂಲಕ ಹೊಸ ಯೋಜನೆಗಳ ರೂವಾರಿ ಆರ್.ಎಫ್.ಓ ಮಂಜುನಾಥ ಆರ್. ಮೇಗಲಮನಿ ಅವರ ಜೊತೆ-ಗೆ ಸಿಬ್ಬಂದಿ ವರ್ಗದವರೂ ಕೈಜೋಡಿಸುತ್ತಿದ್ದಾರೆ.

ಗಾಳಿಗುಂಡಿ ಬೆಟ್ಟ ವಲಯದಲ್ಲಿ ವೃಕ್ಷ ಬಂಧನದ ಮೂಲಕ ಬೆಳೆಯುವ ಮರ-ಗಿಡ, ಬಳ್ಳಿಗಳ ಬೀಜಗಳನ್ನು ಬಳಸಿ ತಯಾರಿಸಿದ ಪ್ಲಾಸ್ಟಿಕ್ ಮುಕ್ತ ರಾಖಿಗಳನ್ನು ಕಪ್ಪತ್ತಗುಡ್ಡದ ಗಿಡ-ಮರಗಳಿಗೆ ಕಟ್ಟಿ ಮಳೆಯಿಂದ ರಾಖಿಗಳ ಬೀಜಗಳು ನೆಲಕ್ಕೆ ಬಿದ್ದು ಮೊಳಕೆಯೊಡೆದು ಕಪ್ಪತ್ತಗುಡ್ಡ ಇನ್ನಷ್ಟು ಹಸಿರಾಗಲಿ, ಜೀವ ಸೆಲೆಗೆ ಮುನ್ನುಡಿಯಾಗಲಿ ಎನ್ನುವ ವಿನೂತನ ಮಾದರಿಯನ್ನಂತೂ ಮೆಚ್ಚಲೇಬೇಕು.

ವಿಶೇಷ ವಿನ್ಯಾಸವನ್ನು ಆಧರಿಸಿ, ಸಿಮೆಂಟನ್ನು ಬಳಸಿ ದೊಡ್ಡ ಮರದ ತುಂಡಿನ ಆಕಾರದಲ್ಲಿ ಕಪ್ಪತ್ತಗುಡ್ಡದ ಪ್ರವೇಶದ್ವಾರದಲ್ಲಿ ಟಿಕೆಟ್ ಕೌಂಟರ್ ನಿರ್ಮಾಣ ಮಾಡಲಾಗಿದೆ. ಕಪ್ಪತ್ತಗುಡ್ಡಕ್ಕೆ ಬರುವ ಪ್ರವಾಸಿಗರಿಗೆ ಇದೊಂದು ವಿನೂತನ ಅನುಭವ. ಡೋಣಿ ಗ್ರಾಮದ ಪ್ರವೇಶದ್ವಾರದಲ್ಲಿರುವ ಟಿಕೆಟ್ ಕೌಂಟರ್ ಬಳಿ, ಪ್ರವಾಸಿಗರಿಗೆ ಪರಿಸರ ಸ್ನೇಹಿ ಬಣ್ಣವನ್ನು ಕೈಗೆ ಹಚ್ಚಿಕೊಳ್ಳಲು ಅವಕಾಶ ನೀಡಲಾಗುತ್ತದೆ. ಆ ಬಣ್ಣದ ಕೈಯನ್ನು ಅಲ್ಲಿಯೇ ಪಕ್ಕದಲ್ಲಿ ಅಳವಡಿಸಲಾದ ಇಲಾಖೆಯ ಬೋರ್ಡ್ ಮೇಲೆ ಒತ್ತಿ ತಮ್ಮ ಗುರುತನ್ನು ಮೂಡಿಸಬೇಕು. ನಂತರ, ಬೋರ್ಡ್‌ಲ್ಲಿರುವ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ ತಮ್ಮ ವಿವರಗಳನ್ನು ಅಪ್‌ಲೋಡ್ ಮಾಡಿದ ತಕ್ಷಣ, ಅವರ ಹೆಸರಿನಲ್ಲಿರುವ ಪ್ರಮಾಣಪತ್ರವು ಅವರ ಮೊಬೈಲ್‌ಗೆ ಬರುತ್ತದೆ. ಈ ಪ್ರಮಾಣಪತ್ರದಲ್ಲಿ ಕಪ್ಪತ್ತಗುಡ್ಡದ ಪರಿಸರ ಸಂರಕ್ಷಣೆ ಮತ್ತು ಪ್ಲಾಸ್ಟಿಕ್ ಮುಕ್ತ ವಾತಾವರಣ ನಿರ್ಮಾಣಕ್ಕೆ ಸಹಕರಿಸುವ ಪ್ರತಿಜ್ಞೆ ಇರುತ್ತದೆ. ಇದು ಪ್ರವಾಸಿಗರಲ್ಲಿ ಹೆಮ್ಮೆಯ ಭಾವನೆ ಮೂಡಿಸುತ್ತಿದೆ.

ಕಪ್ಪತ್ತಗುಡ್ಡಕ್ಕೆ ಬರುವ ಪ್ರವಾಸಿಗರ ಸಂಖ್ಯೆ ದಿನೇ ದಿನೇ ಹೆಚ್ಚಾಗುತ್ತಿರುವ ಕಾರಣ, ಎರಡು ಹೊಸ ಸಫಾರಿ ವಾಹನಗಳು ಪ್ರವಾಸಿಗರಿಗೆ ಕಪ್ಪತ್ತಗುಡ್ಡದ ಪರಿಸರದಲ್ಲಿ ಸುಲಭವಾಗಿ ಸಂಚರಿಸಲು ಸಹಾಯಕವಾಗಿದೆ. ಪ್ರವಾಸಿಗರು ಆನ್‌ಲೈನ್ ಮೂಲಕವೇ ಸಫಾರಿ ಬುಕಿಂಗ್ ಮಾಡಿಕೊಳ್ಳಲು ಸೌಲಭ್ಯ ಕಲ್ಪಿಸಿರುವುದು ವಿಶೇಷ.


ಕಪ್ಪತ್ತಗುಡ್ಡದ ಭಾಗದಲ್ಲಿ ನೂರಾರು ವಿವಿಧ ಚಿಟ್ಟೆಗಳು ಕಂಡುಬರುತ್ತವೆ. ಅದರ ಆಧಾರದ ಮೇಲೆ ಪ್ರವಾಸಿಗರು ಕಪ್ಪತ್ತಗುಡ್ಡ ಪರಿಸರದತ್ತ ದೌಡಾಯಿಸಬೇಕು ಎಂಬ ಉದ್ದೇಶದಿಂದ ಚಿಟ್ಟೆಯಿಂದ ಪರಿಸರಕ್ಕೆ ಏನೆಲ್ಲ ಲಾಭವಿದೆ ಎನ್ನುವ ಫಲಕಗಳನ್ನು ಅಳವಡಿಸಿ ಪರಿಸರದ ಕಾಳಜಿ ಮೂಡಿಸಲಾಗುತ್ತಿದೆ. ಪ್ರವಾಸಿಗರು ದಾರಿ ತಪ್ಪಿಸಿಕೊಳ್ಳದೇ ಕಪ್ಪತ್ತಗುಡ್ಡ ತಲುಪಬೇಕು ಎನ್ನುವ ಹಿನ್ನೆಲೆಯಲ್ಲಿ ಪ್ರತಿ ಮುಖ್ಯ ರಸ್ತೆ ಮತ್ತು ಗ್ರಾಮೀಣ ಭಾಗಗಳಲ್ಲಿ ಕಪ್ಪತ್ತಗುಡ್ಡಕ್ಕೆ ತೆರಳುವ ವಿವಿಧ ಪ್ರಾಣಿಗಳ ಚಿತ್ರವಿನ್ಯಾಸವಿರುವ ಮಾರ್ಗಫಲಕಗಳನ್ನು ಬಹಳ ಸುಂದರವಾಗಿ ನಿರ್ಮಿಸಲಾಗಿದೆ.

> ಕಪ್ಪತ್ತಗುಡ್ಡದಲ್ಲಿ ಸುಸ್ಥಿರ ಪರಿಸರ ಬೆಳೆಸಲು, ಪ್ರಾಣಿಗಳ ರಕ್ಷಣೆಗೆ ಮತ್ತು ಪ್ರವಾಸಿ ತಾಣವನ್ನಾಗಿ ಮಾಡುವಲ್ಲಿ ಅರಣ್ಯ ಇಲಾಖೆಯ ಹಿರಿಯ, ಅನುಭವಿ ಅಧಿಕಾರಿಗಳ ಸಹಕಾರದಿಂದ ಈ ಕಾರ್ಯಕ್ರಮ ಯಶಸ್ವಿಯಾಗಿದೆ. ಇದರಿಂದ ಕಪ್ಪತ್ತಗುಡ್ಡಕ್ಕೆ ಭೇಟಿ ನೀಡುವ ಪ್ರವಾಸಿಗರ ಸಂಖ್ಯೆ ದಿನೇ ದಿನೇ ಹೆಚ್ಚುತ್ತಿದೆ.
>
> **– ಮಂಜುನಾಥ ಮೇಗಲಮನಿ.**
> ಆರ್.ಎಫ್.ಓ, ಮುಂಡರಗಿ.




> ಕಪ್ಪತ್ತಗುಡ್ಡದಲ್ಲಿ ಪರಿಸರ ಪ್ರವಾಸೋದ್ಯಮವನ್ನು ಉತ್ತೇಜಿಸುವುದರ ಜೊತೆಗೆ, ಇಲ್ಲಿನ ವನ್ಯಜೀವಿಗಳ ರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡುವುದು, ಕಪ್ಪತ್ತಗುಡ್ಡ ಒಡಲಿನಲ್ಲಿರುವ ಹಾಗೂ ಸುತ್ತಮುತ್ತಲಿನ 93 ಕೆರೆಗಳ ಅಭಿವೃದ್ಧಿಗೆ ಒತ್ತು ಹಾಗೂ ಹೊಸ ಟ್ರೆಕಿಂಗ್ ಪಾಥ್ ಗುರುತಿಸಿ ಯುವ ಸಮುದಾಯವನ್ನು ಕಪತ್ತಗುಡ್ಡದತ್ತ ಆಕರ್ಷಿಸಿ, ಯುವ ಜನತೆಯಲ್ಲಿ ಪರಿಸರ ಉಳಿಸಿ-ಬೆಳೆಸುವ ಪ್ರೇರಣೆಯನ್ನು ಅರಣ್ಯ ಇಲಾಖೆ ಹೆಚ್ಚಿಸುತ್ತಿದೆ.

# ಅಧಿಕಾರಾವಧಿ ಗೊಂದಲಕ್ಕೆ ತೆರೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪುರಸಭೆ ಆಡಳಿತ ಮಂಡಳಿ ಅವಧಿ ಪೂರ್ಣಗೊಂಡಿದ್ದರಿಂದ ಪುರಸಭೆ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸ್ಥಾಯಿ ಸಮಿತಿ ಅಧ್ಯಕ್ಷರ ಕೊಠಡಿಗಳಿಗೆ ಬೀಗ ಹಾಕಿಸುವಂತೆ ಕರವೇ (ಪ್ರವೀಣಶೆಟ್ಟಿ) ಬಣದ ಕಾರ್ಯಕರ್ತರು ಒತ್ತಾಯಿಸಿದರು.

ನ. 4ರಂದೇ ಪುರಸಭೆ ಚುನಾಯಿತ ಸದಸ್ಯರ ಆಡಳಿತಾವಧಿ ಕೊನೆಗೊಂಡಿದೆ. ಆದರೆ ಇನ್ನೂ 15 ತಿಂಗಳು ನಮಗೆ ಅಧಿಕಾರ ನಡೆಸಲು ಅವಕಾಶ ನೀಡಬೇಕು ಎಂದು ಸದಸ್ಯರು ನ್ಯಾಯಾಲಯದ ಮೊರೆ ಹೋಗಿದ್ದರು. ಸದಸ್ಯರು ನ್ಯಾಯಾಲಯಕ್ಕೆ ಹೋಗಿದ್ದರಿಂದ ಪುರಸಭೆಯಲ್ಲಿನ ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ಸ್ಥಾಯಿ ಸಮಿತಿ ಅಧ್ಯಕ್ಷರ ಕೊಠಡಿ ಹಾಗೂ ಕೊಠಡಿಯಲ್ಲಿನ ನಾಮಫಲಕಗಳನ್ನು ಅಧಿಕಾರಿಗಳು ತೆರವುಗೊಳಿಸಿರಲಿಲ್ಲ. ಇದನ್ನು ಪ್ರಶ್ನಿಸಿ ಶುಕ್ರವಾರ ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ ಶೆಟ್ಟಿ) ಬಣದ ಕಾರ್ಯಕರ್ತರು ಪುರಸಭೆಗೆ ಆಗಮಿಸಿ ಅವಧಿ ಪೂರ್ಣಗೊಂಡಿದ್ದರೂ ಅವರ ನಾಮಫಲಕ ಏಕೆ ತೆರವುಗೊಳಿಸಿಲ್ಲ ಎಂದು ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ ಅವರನ್ನು ಪ್ರಶ್ನಿಸಿದರು. ತಕ್ಷಣ ಬೀಗ ಹಾಕಬೇಕು ಎಂದು ಪಟ್ಟು ಹಿಡಿದರು. ಇದೇ ವೇಳೆ ಮುಖ್ಯಾಧಿಕಾರಿಗಳು, ನಾನು ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸುತ್ತೇನೆ ಕಾಲಾವಕಾಶ ನೀಡಿ ಎಂದರು.

ಆಡಳಿತ ಮಂಡಳಿಯ ಕೆಲ ಸದಸ್ಯರು ಇದಕ್ಕೆ ವಿರೋಧ ವ್ಯಕ್ತಪಡಿಸಿದರು. ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿದ ನಂತರ ಸಿಬ್ಬಂದಿ ನಾಮಫಲಕ ತೆರವುಗೊಳಿಸಿ ಕೊಠಡಿಗಳಿಗೆ ಬೀಗ ಹಾಕಿದರು. ಈ ವೇಳೆ ವೇದಿಕೆಯ ತಾಲೂಕು ಘಟಕದ ಅಧ್ಯಕ್ಷ ಮಹೇಶ ಕಲಘಟಗಿ ಮಾತನಾಡಿ, ಕಾನೂನಿನ ಪ್ರಕಾರ ನವೆಂಬರ್ 4ರಂದೇ ನಾಮಫಲಕ ತೆರವುಗೊಳಿಸಬೇಕಾಗಿತ್ತು. ಆದರೆ ಇಷ್ಟು ದಿನ ಬಿಟ್ಟಿದ್ದು ಅಧಿಕಾರಿಗಳ ತಪ್ಪು. ಈಗಲಾದರೂ ಮುಖ್ಯಾಧಿಕಾರಿಗಳು ನಮ್ಮ ಮನವಿ ಸ್ಪಂದಿಸಿದ್ದು, ಅವರಿಗೆ ಧನ್ಯವಾದ ಹೇಳುತ್ತೇವೆ ಎಂದು ತಿಳಿಸಿದರು.

ಸಾರ್ವಜನಿಕರಲ್ಲಿ ತೀವ್ರ ಕುತೂಹಲಕ್ಕೆ ಕಾರಣವಾಗಿದ್ದ ಪುರಸಭೆ ಸದಸ್ಯರ ಅಧಿಕಾರಾವಧಿ ಗೊಂದಲಕ್ಕೆ ಶುಕ್ರವಾರ ಕೊನೆಗೂ ತೆರೆ ಬಿದ್ದಿತು.

# ಮೃತಪಟ್ಟ ವ್ಯಕ್ತಿ ಮತ್ತೆ ಜೀವಂತ! ಗದಗನಲ್ಲಿ ಅಚ್ಚರಿ ಘಟನೆ


■ ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ಬೆಟಗೇರಿಯಲ್ಲಿ ಅಚ್ಚರಿಯ ಘಟನೆ ನಡೆದಿದೆ. ಪಿತ್ತಕೋಶದ ಸಮಸ್ಯೆಯಿಂದ ಧಾರವಾಡದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಬೆಟಗೇರಿ ನಿವಾಸಿ ಶಸ್ತ್ರ ಚಿಕಿತ್ಸೆ ವೇಳೆ ಮೃತಪಟ್ಟಿದ್ದಾರೆ ಎಂದು ವೈದ್ಯರು ತಿಳಿಸಿದ್ದರು. ಆದ್ರೆ ಮನೆಗೆ ತರುವ ವೇಳೆ ಮತ್ತೆ ಉಸಿರಾಡುವ ಮೂಲಕ ಎಲ್ಲರಿಗೂ ಅಚ್ಚರಿಗೊಳಿಸಿದ್ದಾರೆ.

ಹೌದು ಗದಗ ಬೆಟಗೇರಿ ನಿವಾಸಿ ನಾರಾಯಣ ವನ್ನಾಲ್ (38) ಅವರು ಪಿತ್ತಕೋಶದ ಸಮಸ್ಯೆಯಿಂದ ಧಾರವಾಡದ ಖಾಸಗಿ ಆಸ್ಪತ್ರೆಗೆ ದಾಖಲಾಗಿ ಶಸ್ತ್ರಚಿಕಿತ್ಸೆಗೊಳಗಾಗಿದ್ದರು. ಸುಮಾರು ಆರು ಗಂಟೆಗಳ ಕಾಲ ನಡೆದ ಶಸ್ತ್ರಚಿಕಿತ್ಸೆಯ ನಂತರ ವೈದ್ಯರು ನಾರಾಯಣ ವನ್ನಾಲ್ ಪ್ರಾಣ ಹೋಗಿದೆ ಎಂದು ಘೋಷಿಸಿದರು.

ಮೃತದೇಹವನ್ನು ಕುಟುಂಬಸ್ಥರು ಆ್ಯಂಬುಲೆನ್ಸ್‌ನಲ್ಲಿ ಗದಗದ ಬೆಟಗೇರಿಗೆ ಕರೆದುಕೊಂಡು ಬಂದು ಅಂತ್ಯಕ್ರಿಯೆಗೆ ಸಿದ್ಧತೆ ನಡೆಸಿದರು. "ಮತ್ತೆ ಹುಟ್ಟಿ ಬಾ", "ಆತ್ಮಕ್ಕೆ ಶಾಂತಿ ಸಿಗಲಿ", "ಭಾವಪೂರ್ಣ ಶ್ರದ್ಧಾಂಜಲಿ" ಎಂಬ ಬ್ಯಾನರ್‌ಗಳು ಊರಿನಲ್ಲಿ ಹಾಕಿದ್ದರು. ಸಾಮಾಜಿಕ ಜಾಲತಾಣಗಳಲ್ಲೂ ನಾರಾಯಣ ಅವರ ನಿಧನ ಸುದ್ದಿ ವೈರಲ್ ಆಗಿತ್ತು.

ಆದರೆ ಮನೆಗೆ ತಲುಪುತ್ತಿದ್ದಂತೆಯೇ ನಾರಾಯಣ ಅಚ್ಚರಿಯಾಗಿ ಉಸಿರಾಟ ಆರಂಭಿಸಿದರು. ತಕ್ಷಣ ಕುಟುಂಬಸ್ಥರು ಬೆಟಗೇರಿಯ ಖಾಸಗಿ ಆಸ್ಪತ್ರೆಗೆ ದಾಖಲಿಸಿದರು. ಸದ್ಯ ಅವರು ಚಿಕಿತ್ಸೆ ಪಡೆಯುತ್ತಿದ್ದಾರೆ. ಈ ಅಚ್ಚರಿಯ ಘಟನೆಯಿಂದ ಗದಗ-ಬೆಟಗೇರಿಯಲ್ಲಿ ಸಂಚಲನ ಮೂಡಿದೆ. "ಇದು ದೇವರ ಪವಾಡ" ಎಂದು ಸ್ಥಳೀಯರು ಹೇಳಿಕೊಂಡಿದ್ದಾರೆ. ಕುಟುಂಬ ಸದಸ್ಯರು ಕೂಡ "ನಾರಾಯಣ ಅವರು ಬೇಗ ಗುಣಮುಖರಾಗಲಿ" ಎಂದು ದೇವರಲ್ಲಿ ಪ್ರಾರ್ಥನೆ ಸಲ್ಲಿಸಿದ್ದಾರೆ.






# ಸೇವೆಯನ್ನು ಸುಧಾರಿಸಲು ಬ್ಯಾಂಕ್ ಸಿಬ್ಬಂದಿಗೆ ಸ್ಥಳೀಯ ಭಾಷೆ ತಿಳಿದಿರಬೇಕು: ನಿರ್ಮಲಾ ಸೀತಾರಾಮನ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಸೇವೆಯನ್ನು ಸುಧಾರಿಸಲು ಸ್ಥಳೀಯ ಭಾಷೆಗಳಲ್ಲಿ ನಿರರ್ಗಳವಾಗಿ ಮಾತನಾಡುವ ಸಿಬ್ಬಂದಿಯನ್ನು ನೇಮಿಸುವಂತೆ ಬ್ಯಾಂಕುಗಳಿಗೆ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಆಗ್ರಹಿಸಿದರು.

ಎಸ್‌ಬಿಐ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, 'ಭಾಷೆಯ ವಿಷಯವಾಗಿ ಗ್ರಾಹಕರೊಂದಿಗಿನ ಸಂವಹನ ಕ್ಷೀಣಿಸುತ್ತಿರುವುದರಿಂದ ಕ್ರೆಡಿಟ್ ಮಾಹಿತಿ ಕಂಪನಿಗಳ ಮೇಲಿನ ಅವಲಂಬನೆ ಹೆಚ್ಚಾಗಿದೆ. ಈ ಸಮಸ್ಯೆಯಿಂದಾಗಿ ಮಾಹಿತಿ ದಾಖಲಿಸುವ ಪ್ರಕ್ರಿಯೆಯೂ ಹೆಚ್ಚು ಸಮಯ ತೆಗೆದುಕೊಳ್ಳುತ್ತಿದೆ. ಇದರಿಂದಾಗಿ ಗ್ರಾಹಕರಿಗೆ ಸಾಲ ನೀಡಲು ನಿರಾಕರಿಸುತ್ತಿರುವ ಪ್ರಕರಣಗಳೂ ಹೆಚ್ಚಾಗುತ್ತಿವೆ' ಎಂದು ಎಚ್ಚರಿಸಿದ್ದಾರೆ. ಸ್ಥಳೀಯ ಭಾಷೆಗಳನ್ನು ಮಾತನಾಡದ ಬ್ಯಾಂಕ್ ಅಧಿಕಾರಿಗಳ ವಿರುದ್ಧ ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಹೊರಹಾಕುತ್ತಿರುವ ಆಕ್ರೋಶ ಕುರಿತು ಮಾತನಾಡಿರುವ ನಿರ್ಮಲಾ ಸೀತಾರಾಮನ್, 'ಬ್ಯಾಂಕ್ ಸಿಬ್ಬಂದ ನೇಮಕಾತಿ ಪ್ರಕ್ರಿಯೆಯಲ್ಲೂ ಬಹಳಷ್ಟು ಬದಲಾವಣೆ ಆಗಬೇಕಿದೆ.

# 'ಯುವನಿಧಿ ಪ್ಲಸ್' ಕಾರ್ಯಾಗಾರಕ್ಕೆ ಚಾಲನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಶಿರಹಟ್ಟಿಯಲ್ಲಿ ಯುವನಿಧಿ ಪ್ಲಸ್ ತರಬೇತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾ ಕೌಶಲ್ಯಧಿಕಾರಿಗಳು ಹಾಗು ಪ್ರಾಚಾರ್ಯ ಬಸವರಾಜ ಮಲ್ಲೂರು ಕಾರ್ಯಾಗಾರ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ರೋಣ, ಶಿರಹಟ್ಟಿಯ ಸರಕಾರಿ ಕೈಗಾರಿಕಾ ಸಂಸ್ಥೆ ಪ್ರಾಂಶುಪಾಲರು ಹಾಗೂ ಸಿಬ್ಬಂದಿಗಳಾದ ಸಾತಪುತೆ ಜೀವಪ್ಪ, ರಾಘವೇಂದ್ರ ಕೆ, ಶಿವಲೀಲಾ ಗಮನ್ನವರ, ವೀಣಾ ಸೂರಣಗಿ, ಅಮೃತ ಬೀಳವಾದ, ಟ್ರೈನರ್ ಸಾಜೀದ್ ಹಾಗೂ ಕೊ-ಆರ್ಡಿನೇಟರ್ ರಾಘವೇಂದ್ರ ಕೆ ಸೇರಿದಂತೆ ಸಂಸ್ಥೆಯ ಎಲ್ಲಾ ತರಬೆತುದಾರರು ಭಾಗವಹಿಸಿದ್ದರು.

# ಅಕ್ರಮ ಪಡಿತರ ಅಕ್ಕಿ ವಶಕ್ಕೆ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ಪಟ್ಟಣದ ಸಮೀಪ ಬೈಪಾಸ್ ರಸ್ತೆಯಲ್ಲಿ ಶುಕ್ರವಾರ ಟಾಟಾ ಏಸ್ ವಾಹನದಲ್ಲಿ ಅನಧಿಕೃತವಾಗಿ ಪಾಸ್/ಪರ್ಮಿಟ್ ಇಲ್ಲದೇ ಸರ್ಕಾರದಿಂದ ವಿತರಣೆಯಾಗುವ 11 ಕ್ವಿಂಟಾಲ್ 33 ಕೆಜಿ ತೂಕದ 26059 ರೂ ಕಿಮ್ಮತ್ತಿನ ಪಡಿತರ ಅಕ್ಕಿಯನ್ನು 23 ವಿವಿಧ ಪ್ಲಾಸ್ಟಿಕ್ ಚೀಲಗಳಲ್ಲಿ ತುಂಬಿಕೊಂಡು ಬೆಳ್ಳಟ್ಟಿ ಕಡೆಯಿಂದ ಸಾಗಿಸುತ್ತಿದ್ದ ಸಂದರ್ಭದಲ್ಲಿ ಆಹಾರ ನಿರೀಕ್ಷಕಿ ಮಂಜುಳಾ ಆಕಳದ ಅಕ್ಕಿಯನ್ನು ವಶಪಡಿಸಿಕೊಂಡು ಶಿರಹಟ್ಟಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಈ ಸಂದರ್ಭದಲ್ಲಿ ಶಿರಹಟ್ಟಿ ಪಿಎಸ್‌ಐ ಈರಪ್ಪ ರಿತ್ತಿ, ಗ್ರಾಮಲೆಕ್ಕಾಧಿಕಾರಿ ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# ಖರೀದಿ ಕೇಂದ್ರದ ಸದುಪಯೋಗ ಪಡೆಯಿರಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಸಕ್ತ ವರ್ಷ ಅತಿವೃಷ್ಟಿಯ ನಡುವೆಯೂ ರೈತರು ಬೆಳೆದ ಉತ್ಪನ್ನಗಳಿಗೆ ಬೆಲೆ ಇಲ್ಲದಿರುವ ಸಂದರ್ಭದಲ್ಲಿ ಕೇಂದ್ರ ಸರ್ಕಾರ ಬೆಂಬಲ ಬೆಲೆ ಯೋಜನೆ ಅಡಿಯಲ್ಲಿ ಹತ್ತಿ ಖರೀದಿ ಕೇಂದ್ರ ಆರಂಭ ಮಾಡಿರುವುದು ಶ್ಲಾಘನೀಯ. ರೈತರು ಇದರ ಲಾಭ ಪಡೆದುಕೊಳ್ಳಬೇಕು ಎಂದು ಬಿಸಿಎನ್ ಕಾಟನ್ ಇಂಡಸ್ಟ್ರೀಸ್‌ನ ಮಾಲೀಕ ಲೋಹಿತ ನೆಲವಿಗಿ ಹೇಳಿದರು.

ಪಟ್ಟಣದ ಬಿಸಿಎನ್ ಕಾಟನ್ ಇಂಡಸ್ಟ್ರೀಯಲ್ಲಿ ಶುಕ್ರವಾರ ಬೆಂಬಲ ಯೋಜನೆ ಅಡಿಯಲ್ಲಿ ಹತ್ತಿ ಖರೀದಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಅತಿವೃಷ್ಟಿ, ಬರಗಾಲದಂತಹ ಸ್ಥಿತಿ ನಿರ್ಮಾಣವಾದಾಗ ರೈತರು ಆರ್ಥಿಕ, ಸಾಮಾಜಿಕ ಮತ್ತು ನೈತಿಕವಾಗಿ ಕುಗ್ಗಿ ಹೋಗಿದ್ದಾರೆ. ಈ ವರ್ಷ ಮುಂಗಾರು ಹಂಗಾಮಿನಲ್ಲಿ ಬೆಳೆದ ಹೆಸರು, ಈರುಳ್ಳಿ, ಶೇಂಗಾ, ಗೋವಿನಜೋಳ, ಬೆಳ್ಳುಳ್ಳಿ ಬೆಳೆಗಳು ಅತಿವೃಷ್ಟಿಯಿಂದ ಹಾಳಾಗಿ ಹೋಗಿವೆ. ಇಂತಹ ಸಂದರ್ಭದಲ್ಲಿ ಕೇಂದ್ರ ಸರ್ಕಾರ ರೈತರ ನೆರವಿಗೆ ಧಾವಿಸಿರುವುದು ಶ್ಲಾಘನೀಯ. ಈಗ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಹತ್ತಿ ಖರೀದಿ ಕೇಂದ್ರ ಆರಂಭವಾಗಿದ್ದು, ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಹಾಗೂ ಆರ್ಥಿಕವಾಗಿ ಸಬಲರಾಗಬೇಕು ಎಂದು ಹೇಳಿದರು. ಕೇಂದ್ರ ಸರ್ಕಾರದ ಹತ್ತಿ ಖರೀದಿ ಅಧಿಕಾರಿ ರಾಜೇಶ್ ಮಾತನಾಡಿ, ರೈತರು ತಾವು ಬೆಳೆದ ಹತ್ತಿ ಬೆಳೆಯನ್ನು ಬೆಂಬಲ ಯೋಜನೆ ಅಡಿಯಲ್ಲಿ ಮಾರಾಟ ಮಾಡಿ ಲಾಭ ಪಡೆದುಕೊಳ್ಳಬೇಕು. ಯೋಜನೆಗಾಗಿ ನೋಂದಣಿ ಮಾಡಿಕೊಳ್ಳುವ ಅವಧಿಯನ್ನು ಸರ್ಕಾರ ಡಿಸೆಂಬರ್ 31ರವರೆಗೆ ವಿಸ್ತರಿಸಿದ್ದು ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಈ ವೇಳೆ ಗೋವಿಂದೇಗೌಡ ಪಾಟೀಲ, ರಾಜಣ್ಣ ಹೊಳಲಾಪೂರ, ಎಪಿಎಂಸಿ ಕಾರ್ಯದರ್ಶಿ ರುದ್ರಗೌಡ ಪಾಟೀಲ, ಪ್ರಕಾಶ ಹುಲಿ ಕೋಟಿ ಸೇರಿದಂತೆ ರೈತರು ಇದ್ದರು.

# ವಿದ್ಯಾರ್ಥಿಗಳ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಅಲ್ಪಸಂಖ್ಯಾತರ ನಿರ್ದೇಶನಾಲಯವು ಗದಗ ಜಿಲ್ಲೆಯಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಹಾಗೂ ಗ್ರೂಪ್ 'ಸಿ', ಪರೀಕ್ಷಾ ಪೂರ್ವ ತರಬೇತಿಗಾಗಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಪರೀಕ್ಷೆಗಳನ್ನು ನಡೆಸುತ್ತಿದೆ.

ಗದಗ ಜಿಲ್ಲೆಯ ಡಾ. ಎ.ಪಿ.ಜೆ ಅಬ್ದುಲ್ ಕಲಾಂ ವಸತಿಶಾಲೆಯಲ್ಲಿ ಈ ಪರೀಕ್ಷೆಗಳು ನಡೆಯಲಿವೆ. KPSC ಗ್ರೂಪ್ '1' RRB ಮತ್ತು ಖಖಅ ಗಾಗಿ ನ. 8ರಂದು ಮತ್ತು UPSC/KASಗಾಗಿ ನ. 9ರಂದು ಅಭ್ಯರ್ಥಿಗಳು ತಮ್ಮ ಆನ್‌ಲೈನ್ ನೋಂದಣಿ ಪತ್ರ ಮತ್ತು ಮೂಲ ಗುರುತಿನ ಚೀಟಿಯೊಂದಿಗೆ ಪರೀಕ್ಷೆಗೆ ಹಾಜರಾಗಲು ಪ್ರಕಟಣೆಯಲ್ಲಿ ತಿಳಿಸಿದೆ.




ಗದಗ ನಗರದ ವಿದ್ಯಾದಾನ ಸಮಿತಿಯ ಕ್ಲಾಸಿಕ್ ಆಂಗ್ಲ ಮಾಧ್ಯಮ ಸಿಬಿಎಸ್‌ಇ ಶಾಲೆಯಲ್ಲಿ ಕನ್ನಡ ರಾಜ್ಯೋತ್ಸವದ ಅಂಗವಾಗಿ ಪ್ರಾಥಮಿಕ ಹಾಗು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಕನ್ನಡ ನಾಡು-ನುಡಿಯ ಕುರಿತು ತರಗತಿವಾರು ಭಾಷಣ ಸ್ಪರ್ಧೆ ಏರ್ಪಡಿಸಲಾಗಿತ್ತು. ಈ ಸಂದರ್ಭದಲ್ಲಿ ಶಾಲೆಯ ಪ್ರಾಚಾರ್ಯ ಎಂ.ಆರ್. ಡೊಳ್ಳಿನ, ಉಪ ಪ್ರಾಚಾರ್ಯ ಅಕ್ಷಯ್ ಜಿ, ಕನ್ನಡ ಭಾಷಾ ಶಿಕ್ಷಕಿ ರೇಣುಕಾ ವೆಂಕಟಾಪುರ, ಶಿಕ್ಷಕ ವೃಂದದವರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ರಾಷ್ಟ್ರಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ನವೆಂಬರ್ 14, 15ರಂದು ನಡೆಯಲಿರುವ 10ನೇ ಪುರುಷ ಹಾಗೂ ಮಹಿಳೆಯರ ರಾಷ್ಟ್ರಮಟ್ಟದ ಕ್ರೀಡಾಕೂಟವು ತೆಲಂಗಾಣ ರಾಜ್ಯದ ನಾಗಲಕುರಲ್‌ನಲ್ಲಿ ನಡೆಯಲಿದೆ. ಸದರಿ ಕ್ರೀಡಾಕೂಟದ ಅಟ್ಯಾ-ಪಟ್ಯಾ ಪಂದ್ಯಾಟಕ್ಕೆ ದಿ ಕರ್ನಾಟಕ ಕುರುಬರ ಸಂಘದ ಎಚ್.ವ್ಹಿ. ಕುರಡಗಿ ಪ್ರೌಢಶಾಲೆಯ ವಿದ್ಯಾರ್ಥಿನಿ ಲಕ್ಷ್ಮೀ ವಸ್ತ್ರದ ಆಯ್ಕೆಯಾಗಿದ್ದಾಳೆ.

ಸಾಧಕ ವಿದ್ಯಾರ್ಥಿನಿಗೆ ಹಾಗೂ ತರಬೇತಿ ನೀಡಿದ ಶಾಲೆಯ ದೈಹಿಕ ಶಿಕ್ಷಕ ಸಂತೋಷ ನಾಯಕ ಇವರಿಗೆ ಸಂಸ್ಥೆಯ ಗೌರವ ಕಾರ್ಯದರ್ಶಿ ವಾಸಣ್ಣ ಕುರಡಗಿ, ಶಾಲೆಯ ಅಧ್ಯಕ್ಷ ಡಾ. ಶ್ರೀಧರ ಕುರಡಗಿ, ಶಾಲೆಯ ಮುಖ್ಯೋಪಾಧ್ಯಾಯರಾದ ಕುಬೇರಪ್ಪ ಕಲಾರಿ, ಶಾಲೆಯ ಸಮಸ್ತ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.



VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka